# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 293 ₹4, WEDNESDAY, 17 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26


## ಕೋವಿಡ್–19: ಇಳಿಕೆ; ಮೂವರು ಸಾವು

ನವದೆಹಲಿ: ದೇಶದಲ್ಲಿ ದಿನದಿಂದ ದಿನಕ್ಕೆ ಕೋವಿಡ್ ಪ್ರಕರಣಗಳ ಸಂಖ್ಯೆಯಲ್ಲಿ ಇಳಿಮುಖವಾಗುತ್ತಿದ್ದು, ಕಳೆದ 24 ಗಂಟೆಗಳ ಅವಧಿಯಲ್ಲಿ 180 ಹೊಸ ಕೊರೊನಾವೈರಸ್ ಸೋಂಕು ಪ್ರಕರಣಗಳು ಪತ್ತೆಯಾಗಿವೆ. ಇದೇ ವೇಳೆ ಸಕ್ರಿಯ ಪ್ರಕರಣಗಳ ಸಂಖ್ಯೆ 2,804ಕ್ಕೆ ಇಳಿಕೆಯಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಮಂಗಳವಾರ ತಿಳಿಸಿದೆ.

ಮುಂಜಾನೆ 8 ಗಂಟೆಗೆ ಲಭ್ಯವಾದ ನವೀಕೃತ ಮಾಹಿತಿ ಪ್ರಕಾರ, ಇದೇ ಅವಧಿಯಲ್ಲಿ ಮಹಾರಾಷ್ಟ್ರದಲ್ಲಿ ಮೂವರು ಸಾವಿಗೀಡಾಗಿದ್ದಾರೆ. 2020ರ ಕೊನೆಯಲ್ಲಿ ಆರಂಭವಾದ ಕೋವಿಡ್ ಸಾಂಕ್ರಾಮಿಕದ ನಾಲ್ಕು ವರ್ಷಗಳಿಂದಲೂ ಈವರೆಗೆ 4.5 ಕೋಟಿಗೂ ಅಧಿಕ ಮಂದಿ ಸೋಂಕಿತರಾಗಿದ್ದಾರೆ. ಈ ಪೈಕಿ 5.3 ಲಕ್ಷಕ್ಕೂ ಅಧಿಕ ಮಂದಿ ಕೋವಿಡ್‌ನಿಂದಾಗಿ ಸಾವಿಗೀಡಾಗಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

ಸದ್ಯ ದೇಶದಲ್ಲಿ ಇದುವರೆಗೆ 4.4 ಕೋಟಿಗೂ ಅಧಿಕ ಮಂದಿ ಕೋವಿಡ್‌ನಿಂದ ಚೇತರಿಸಿಕೊಂಡಿದ್ದಾರೆ. ಸದ್ಯ ರಾಷ್ಟ್ರೀಯ ಕೋವಿಡ್ ಚೇತರಿಕೆ ದರ ಶೇ 98.81 ರಷ್ಟಿದೆ. ಸಚಿವಾಲಯದ ವೆಬ್‌ಸೈಟಿನಲ್ಲಿ ನೀಡಲಾಗಿರುವ ಮಾಹಿತಿ ಪ್ರಕಾರ, ದೇಶದಾದ್ಯಂತ ನಡೆಯುತ್ತಿರುವ ಲಸಿಕಾ ಅಭಿಯಾನದ ಅಡಿ ಈವರೆಗೆ 220.67 ಕೋಟಿಗೂ ಅಧಿಕ ಕೋವಿಡ್ ವಿರುದ್ಧದ ಲಸಿಕಾ ಡೋಸ್‌ಗಳನ್ನು ವಿತರಿಸಲಾಗಿದೆ.

## ರಾಜ್ಯದ ಎಲ್ಲಾ ಪೊಲೀಸ್ ಸಿಬ್ಬಂದಿಗೆ ಬೆಳ್ಳಿ ಪದಕ, ವೈದ್ಯಕೀಯ ವೆಚ್ಚ 1,500 ರೂ.ಗೆ ಹೆಚ್ಚಳ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ರಾಜ್ಯದ ಎಲ್ಲಾ ಪೊಲೀಸ್ ಸಿಬ್ಬಂದಿಗೆ ಬೆಳ್ಳಿ ಪದಕ ನೀಡಲಾಗುವುದು ಮತ್ತು ವೈದ್ಯಕೀಯ ವೆಚ್ಚವನ್ನು 1 ಸಾವಿರದಿಂದ 1,500 ರೂ.ಗೆ ಹೆಚ್ಚಳ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಘೋಷಿಸಿದ್ದಾರೆ.

ರಾಜ್ಯದಲ್ಲಿ ಭವ್ಯವಾದ ಸುಸಜ್ಜಿತ ಸುವರ್ಣ ಪೊಲೀಸ್ ಭವನ ನಿರ್ಮಾಣ ಮಾಡಲಾಗುವುದು. ಇದಕ್ಕಾಗಿ ಬಜೆಟ್‌ನಲ್ಲಿ ಹಣ ನಿಗದಿ ಮಾಡುತ್ತೇನೆ. ಸಿಇಎನ್ ಠಾಣಾಧಿಕಾರಿಗಳ ಹುದ್ದೆಯನ್ನು ಎಸಿಪಿ ಮತ್ತು ಡಿಸಿಪಿ ಮಟ್ಟಕ್ಕೆ ಉನ್ನತೀಕರಿಸಲಾಗುವುದು ಮತ್ತು ಬೆಂಗಳೂರು ನಗರದಲ್ಲಿ 8 ಅಡಿಷನಲ್ ಡಿಸಿಪಿ ಹುದ್ದೆಗಳನ್ನು ಹೆಚ್ಚುವರಿಯಾಗಿ ಸೃಜಿಸಲಾಗುವುದು ಎಂದು ಸಿಎಂ ಹೇಳಿದ್ದಾರೆ.

ರಾಜ್ಯ ಪೊಲೀಸ್ ಮಹಾನಿರ್ದೇಶಕರ ಕಚೇರಿಯಲ್ಲಿ ನಡೆದ ಹಿರಿಯ ಪೊಲೀಸ್ ಅಧಿಕಾರಿಗಳ ವಾರ್ಷಿಕ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಹತ್ವದ ಘೋಷಣೆಗಳನ್ನು ಮಾಡಿದ್ದಾರೆ.

2013 ರಿಂದ ಪೊಲೀಸರ ವೈದ್ಯಕೀಯ ತಪಾಸಣೆ ಭತ್ಯೆಯನ್ನು ಹೆಚ್ಚಿಸಿರಲಿಲ್ಲ. ಪೊಲೀಸ್ ಸಿಬ್ಬಂದಿಯ ವೈದ್ಯಕೀಯ ತಪಾಸಣೆ ಭತ್ಯೆ 500 ರೂ. ಹೆಚ್ಚಳ ಮಾಡುತ್ತೇವೆ. ಈ ಹಿಂದೆ 1 ಸಾವಿರ ನೀಡಲಾಗಿತ್ತು, ಈಗ 1,500 ರೂ.ಗೆ ಹೆಚ್ಚಿಸಿದ್ದೇವೆ ಎಂದು ಸಿಎಂ ತಿಳಿಸಿದರು.

ಪೊಲೀಸರಿಗೆ ನಮ್ಮ ಸರ್ಕಾರ ಸಂಪೂರ್ಣ ಫ್ರೀ ಹ್ಯಾಂಡ್ ಕೊಟ್ಟಿದೆ. ಪೊಲೀಸರ ಕೆಲಸದಲ್ಲಿ ಮೂಗು ತೂರಿಸಬಾರದು ಎನ್ನುವುದು ನನ್ನ ಬದ್ಧತೆ. ಆದರೆ ನಾವು ಫ್ರೀ ಹ್ಯಾಂಡ್ ಕೊಟ್ಟಿದ್ದು ದುರುಪಯೋಗ ಆಗಬಾರದು. ಅದು ಜನರಿಗೆ ಅನುಕೂಲ ಆಗುವಂತಿರಬೇಕು ಎಂದು ಸಿಎಂ ಎಚ್ಚರಿಕೆ ನೀಡಿದರು.

ನಮ್ಮದು ಜಾತ್ಯತೀತ ರಾಷ್ಟ್ರ. ನಾವುಗಳೇ ನಮ್ಮ ಸಂವಿಧಾನದ ಆಶಯಗಳನ್ನು ಬಲಪಡಿಸಬೇಕು ಶೋಷಣೆಗೆ ಒಳಗಾದವರಿಗೆ ವ್ಯವಸ್ಥೆ ಮೇಲೆ ನಂಬಿಕೆ ಬರಬೇಕಾದರೆ ದೌರ್ಜನ್ಯ ಪ್ರಕರಣಗಳ ತನಿಖೆಯ ಗುಣಮಟ್ಟ ಹೆಚ್ಚಾಗಬೇಕು. ವೈಜ್ಞಾನಿಕವಾಗಿ ಸಮರ್ಥ ಆರೋಪ ಪಟ್ಟಿ ಸಲ್ಲಿಕೆಯಾಗಬೇಕು ಎಂದು ಸಿಎಂ ಅಧಿಕಾರಿಗಳಿಗೆ ಸಲಹೆ ನೀಡಿದರು.

## ಚಿಕ್ಕೋಡಿ: ದೂಧಗಂಗಾ ನದಿ ದಡದಲ್ಲಿ ರಾಮ ಮಂದಿರ ಪತ್ತೆ



ಚಿಕ್ಕೋಡಿ: ತಾಲ್ಲೂಕಿನ ಸದಲಗಾ ಪಟ್ಟಣದ ಹೊರ ವಲಯದಲ್ಲಿ ದೂಧಗಂಗಾ ನದಿ ದಡದಲ್ಲಿ ಮಣ್ಣಲ್ಲಿ ಹುದುಗಿದ್ದ ರಾಮ ಮಂದಿರ ಪತ್ತೆಯಾಗಿದೆ.

ಎರಡು ತಲೆಮಾರುಗಳ ಹಿಂದೆ ನಮ್ಮೂರಿನ ನದಿ ದಡದಲ್ಲಿ ರಾಮ ಮಂದಿರ ಇತ್ತು. ಆದರೆ ಪ್ರವಾಹದ ವೇಳೆ ಮುಳುಗಿತ್ತು ಎಂದು ಹಿರಿಯರು ಹೇಳುತ್ತಿದ್ದರು. ಅಯೋಧ್ಯೆಯಲ್ಲಿ ರಾಮನ ಮಂದಿರ ಉದ್ಘಾಟನೆ ಆಗುತ್ತಿರುವ ಹಿನ್ನೆಲೆಯಲ್ಲಿ ಯುವಕರು ಸೋಮವಾರ ಇಡೀ ದಿನ ಜೆಸಿಬಿ ಬಳಸಿ ದೇವಸ್ಥಾನವನ್ನು ಪತ್ತೆ ಹಚ್ಚಲು ಶೋಧ ಕಾರ್ಯ ನಡೆಸಿದರು. ಸಂಜೆ ವೇಳೆಗೆ ರಾಮ ಮಂದಿರ ಪತ್ತೆಯಾಯಿತು ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಸ್ಥಳಕ್ಕೆ ಶಾಸಕಿ ಶಶಿಕಲಾ ಜೊಲ್ಲೆ ಭೇಟಿ ನೀಡಿ, ರಾಮ ಮಂದಿರವನ್ನು ವೀಕ್ಷಿಸಿದರು. ಮಣ್ಣಲ್ಲಿ ಹುದುಗಿದ್ದ ರಾಮ ಮಂದಿರ ಪತ್ತೆಯಾದ ಹಿನ್ನೆಲೆಯಲ್ಲಿ ಸದಲಗಾ ಪಟ್ಟಣ ಹಾಗೂ ಸುತ್ತಲಿನ ಅಪಾರ ಸಂಖ್ಯೆಯ ಜನರು ಆಗಮಿಸಿ ಮಂದಿರವನ್ನು ವೀಕ್ಷಿಸುತ್ತಿದ್ದಾರೆ.

## ಸಂಸದ 'ಜಿ.ಎಂ.ಸಿದ್ದೇಶ್ವರ್'ಗೆ ಜೀವ ಬೆದರಿಕೆ



ದಾವಣಗೆರೆ: ಸಂಸದ ಜಿ.ಎಂ. ಸಿದ್ದೇಶ್ವರ್ ಅವರಿಗೆ ಜೀವ ಬೆದರಿಕೆ ಹಾಕಿರೋದಾಗಿ ಗಂಭೀರ ಆರೋಪವನ್ನು ಸ್ವತಹ ಸಂಸದರೇ ಬಹಿರಂಗ ಪಡಿಸಿದ್ದಾರೆ. ಈ ಕುರಿತಂತೆ ಸುದ್ದಿಗಾರರೊಂದಿಗೆ ಮಾತನಾಡಿರುವಂತ ಸಂಸದ ಜಿ.ಎಂ. ಸಿದ್ದೇಶ್ವರ್ ಅವರು, ತಮಗೆ ಜೀವ ಬೆದರಿಕೆ ಹಾಕಲಾಗಿದೆ. ನನಗೆ ಜೀವ ಬೆದರಿಕೆ ಇದೆ. ನನ್ನ ತೆಗೆಯಬೇಕು ಎಂದು ಕೆಲವರು ಕಾಯುತ್ತಿದ್ದಾರೆ ಎಂಬುದಾಗಿ ಗಂಭೀರ ಆರೋಪ ಮಾಡಿದ್ದಾರೆ.

## ಧಾರವಾಡ: ಸೈಬರ್ ವಂಚನೆ; 1.79 ಕೋಟಿ ಹಣ ಕಳೆದುಕೊಂಡ ವೈದ್ಯ

ಹುಬ್ಬಳ್ಳಿ: ಧಾರವಾಡದ ವೈದ್ಯರೊಬ್ಬರು ಸೈಬರ್ ವಂಚಕರ ಬಲೆಗೆ ಬಿದ್ದು ಬರೋಬ್ಬರಿ 1.79 ಕೋಟಿ ರೂ. ಕಳೆದುಕೊಂಡ ಘಟನೆ ಇತ್ತೀಚೆಗೆ ನಡೆದಿದೆ. ಎರಡು ತಿಂಗಳ ಹಿಂದೆ ಅಪರಿಚಿತ ವ್ಯಕ್ತಿಯೊಬ್ಬರ ಫೋನ್ ಕರೆ ಮಾಡಿದ ನಂತರದ ಬೆಳವಣಿಗೆಯಲ್ಲಿ ವೈದ್ಯರು ಹಣ ಕಳೆದುಕೊಂಡಿದ್ದು, ಸದ್ಯ ಈ ಕುರಿತು ಸೈಬರ್ ಕ್ರೈಂ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಫೋನ್ ಕರೆ ಮಾಡಿದ್ದ ಸೈಬರ್ ವಂಚಕ, ಹಣಕಾಸು ಸಲಹೆಗಾರ ಎಂದು ಬಿಂಬಿಸಿದ್ದ. ಷೇರು ಮಾರುಕಟ್ಟೆಯಲ್ಲಿ ತನ್ನ ಮೂಲಕ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭ ತಂದುಕೊಡಲಾಗುವುದು ಎಂದು ವೈದ್ಯರನ್ನು ನಂಬಿಸಿದ್ದ. ಹೆಚ್ಚಿನ ಲಾಭಕ್ಕಾಗಿ 'ಪ್ಲಾನೆಟ್ ಇಮೇಜ್ ಇಂಟರ್ನ್ಯಾಷನಲ್' ಕಂಪನಿಯ ಐಪಿಒ (ಖಕಔ) ದಲ್ಲಿ ಹೂಡಿಕೆ ಮಾಡಲು ವೈದ್ಯರಿಗೆ ಸಲಹೆ ನೀಡಿದ್ದ. ಆತನ ಸಲಹೆಯನ್ನು ನಂಬಿದ ವೈದ್ಯರು ಆತನ ಸಾಮಾಜಿಕ ಮಾಧ್ಯಮ ತಾಣಕ್ಕೆ ಸೇರಿಕೊಂಡಿದ್ದಾರೆ. ಇದಾದ ನಂತರ ಸೈಬರ್ ವಂಚಕರು ವೈದ್ಯರ ಬ್ಯಾಂಕ್ ಖಾತೆಗಳಿಗೆ ಸಂಬಂಧಿಸಿದ ಸೂಕ್ಷ್ಮ ಡೇಟಾವನ್ನು ಯಶಸ್ವಿಯಾಗಿ ಹೊರತೆಗೆದರು. ನಂತರ ವೈದ್ಯರಿಗೆ ಸಂಬಂಧಿಸಿದ ವಿವಿಧ ಬ್ಯಾಂಕ್ ಖಾತೆಗಳಿಂದ ವಂಚಕರು 1.79 ಕೋಟಿ ರೂ. ಎಗರಿಸಿದ್ದಾರೆ. ಅಪರಾಧಿಗಳು ವೈದ್ಯರ ಬ್ಯಾಂಕ್ ಸಂಬಂಧಿತ ಡೇಟಾ ಹಾಗೂ ಗೋಪ್ಯ ವೈಯಕ್ತಿಕ ವಿವರಗಳನ್ನು ಹೇಗೆ ಪೂರ್ತಿಯಾಗಿ ಪಡೆದರು ಎಂಬುದು ಇನ್ನೂ ಅಸ್ಪಷ್ಟವಾಗಿದೆ. ಈ ಬಗ್ಗೆ ಪೊಲೀಸರು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ. ಫೋನ್ ಕರೆ ಮಾಡಿ ವಂಚನೆ ಮಾಡಿದ ಅಪರಿಚಿತ ವ್ಯಕ್ತಿಯ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

## ಜ.22 ರಂದು ಕೋಲ್ಕತ್ತಾದಲ್ಲಿ 'ಸಾಮರಸ್ಯ ರ‍್ಯಾಲಿ' ಘೋಷಿಸಿದ ಮಮತಾ ಬ್ಯಾನರ್ಜಿ

ಕೋಲ್ಕತ್ತಾ: ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನಾ ಸಮಾರಂಭ ನಡುವೆ ಜನವರಿ 22 ರಂದು ಕೋಲ್ಕತ್ತಾದಲ್ಲಿ ಎಲ್ಲಾ ಧರ್ಮಗಳ ಜನರೊಂದಿಗೆ 'ಸಾಮರಸ್ಯ ರ‍್ಯಾಲಿ' ನಡೆಸುವುದಾಗಿ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮಂಗಳವಾರ ಘೋಷಿಸಿದ್ದಾರೆ.

ಆಡಳಿತಾರೂಢ ಟಿಎಂಸಿಯ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಅವರು ಜನವರಿ 22 ರಂದು ಕಾಳಿಘಾಟ್ ದೇವಸ್ಥಾನದಲ್ಲಿ ಕಾಳಿ ದೇವಿಗೆ ಪೂಜೆ ಸಲ್ಲಿಸಿದ ನಂತರ ದಕ್ಷಿಣ ಕೋಲ್ಕತ್ತಾದ ಹಜ್ರಾ ಕ್ರಾಸಿಂಗ್‌ನಿಂದ 'ಸಾಮರಸ್ಯ ರ‍್ಯಾಲಿ' ಪ್ರಾರಂಭಿಸಲಿದ್ದಾರೆ.

ಜನವರಿ 22 ರಂದು ಕಾಳಿಘಾಟ್ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸುತ್ತೇನೆ. ನಂತರ ಎಲ್ಲ ಧರ್ಮದವರೊಂದಿಗೆ ಸೌಹಾರ್ದ ಸಮಾವೇಶದಲ್ಲಿ ಪಾಲ್ಗೊಳ್ಳುತ್ತೇನೆ. ಇದಕ್ಕೂ ಬೇರೆ ಯಾವುದೇ ಕಾರ್ಯಕ್ರಮಕ್ಕೂ ಸಂಬಂಧವಿಲ್ಲ ಎಂದು ಪಶ್ಚಿಮ ಬಂಗಾಳ ಸಿಎಂ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.



ಟಿಎಂಸಿ ಆಯೋಜಿಸಲಿರುವ ಈ ರ‍್ಯಾಲಿ, ಪಾರ್ಕ್ ಸರ್ಕಸ್ ಮೈದಾನದಲ್ಲಿ ಮುಕ್ತಾಯಗೊಳ್ಳುವ ಮುನ್ನ ಮಸೀದಿಗಳು, ಚರ್ಚ್‌ಗಳು ಮತ್ತು ಗುರುದ್ವಾರಗಳು ಸೇರಿದಂತೆ ವಿವಿಧ ಧರ್ಮಗಳ ಪೂಜಾ ಸ್ಥಳಗಳಿಗೆ ಭೇಟಿ ನೀಡಲಿದೆ ಎಂದು ಅವರು ಹೇಳಿದ್ದಾರೆ.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಇದೇ ರೀತಿಯ ರ‍್ಯಾಲಿಗಳನ್ನು ಆಯೋಜಿಸುವಂತೆ ಮಮತಾ ಬ್ಯಾನರ್ಜಿ ಪಕ್ಷದ ಕಾರ್ಯಕರ್ತರಿಗೆ ಕರೆ ನೀಡಿದ್ದಾರೆ. 'ಪ್ರಾಣ ಪ್ರತಿಷ್ಠಾಪನೆ' ಅಥವಾ ಪಟ್ಟಾಭಿಷೇಕ ರಾಜಕಾರಣಿಗಳ ಕೆಲಸವಲ್ಲ. ಅದು ಪುರೋಹಿತರ ಕೆಲಸ. ಮೂಲಸೌಕರ್ಯ ಕಲ್ಪಿಸುವುದು ನಮ್ಮ ಕೆಲಸ ಎಂದು ಪರೋಕ್ಷವಾಗಿ ಪ್ರಧಾನಿ ಮೋದಿ ಟಾಂಗ್ ನೀಡಿದರು.




# 7 ನೇ ವೇತನ ಆಯೋಗ: ಜ. 18ರಂದು ಮಹತ್ವದ ಘೋಷಣೆ

ಬೆಂಗಳೂರು: ಕರ್ನಾಟಕದ ಸರ್ಕಾರಿ ನೌಕರರು 7ನೇ ರಾಜ್ಯ ವೇತನ ಆಯೋಗದ ವರದಿ ಜಾರಿಗೊಳಿಸಲು ಒತ್ತಾಯಿಸುತ್ತಿದ್ದಾರೆ. ಲೋಕಸಭೆ ಚುನಾವಣೆ ದಿನಾಂಕ ಘೋಷಣೆಗೂ ಮೊದಲೇ ಸರ್ಕಾರ ಈ ಕುರಿತು ನಿಲುವು ಪ್ರಕಟಿಸಬೇಕು ಎಂದು ಆಗ್ರಹಿಸುತ್ತಿದ್ದಾರೆ.

ಹಾವೇರಿಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, "ಮಾರ್ಚ್ ಮೊದಲ ವಾರದೊಳಗೆ ಚುನಾವಣಾ ನೀತಿ ಸಂಹಿತೆ ಘೋಷಣೆಯಾಗುವುದರಿಂದ ಫೆಬ್ರವರಿ ತಿಂಗಳಲ್ಲಿಯೇ ಬಜೆಟ್ ಮಂಡಿಸಲಾಗುವುದು" ಎಂದು ಹೇಳಿದ್ದಾರೆ.

2024-25ನೇ ಸಾಲಿನ ಬಜೆಟ್‌ನಲ್ಲಿಯೇ 7ನೇ ರಾಜ್ಯ ವೇತನ ಆಯೋಗದ ವರದಿ ಜಾರಿಗೊಳಿಸುವ ಕುರಿತು ಸರ್ಕಾರ ಘೋಷಣೆ ಮಾಡುವ ನಿರೀಕ್ಷೆ ಇದೆ. ಬಜೆಟ್ ಪೂರ್ವ ಸಭೆಯಲ್ಲಿಯೂ ಈ ಕುರಿತು ಒತ್ತಾಯಿಸಲು ರಾಜ್ಯ ಸರ್ಕಾರಿ ನೌಕರರ ಸಂಘ ತೀರ್ಮಾನಿಸಿದೆ.

ಜನವರಿ 18ರಂದು ಘೋಷಣೆ; ಕರ್ನಾಟಕ ಸರ್ಕಾರ 7ನೇ ರಾಜ್ಯ ವೇತನ ಆಯೋಗದ ಅವಧಿಯನ್ನು 15/3/2023ರ ತನಕ ವಿಸ್ತರಣೆ ಮಾಡಿ ನವೆಂಬರ್‌ನಲ್ಲಿ ಆದೇಶ ಹೊರಡಿಸಿದೆ. ಆದರೆ ಆ ವೇಳೆಗೆ ಲೋಕಸಭೆ ಚುನಾವಣೆ ದಿನಾಂಕ ಘೋಷಣೆಯಾಗಿ ನೀತಿ ಸಂಹಿತೆ ಜಾರಿಗೆ ಬರುವ ನಿರೀಕ್ಷೆ ಇದೆ.

ವೇತನ ಆಯೋಗದ ವರದಿ ಜಾರಿಗೊಳಿಸಲು ಒತ್ತಾಯಿಸುತ್ತಿರುವ ಸರ್ಕಾರಿ ನೌಕರರ ಬೇಡಿಕೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಆದ್ದರಿಂದ ಈ ಕುರಿತು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ತೀರ್ಮಾನವೊಂದನ್ನು ಕೈಗೊಳ್ಳಲಾಗುತ್ತದೆ.




ಜನವರಿ 11ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಸಭೆ ನಿಗದಿಯಾಗಿತ್ತು. ಆದರೆ ಅಂದು ದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಸಚಿವರ ಸಭೆ ಕರೆದ ಕಾರಣ ಜನವರಿ 18ರಂದು ಸಚಿವ ಸಂಪುಟ ಸಭೆ ನಿಗದಿಯಾಗಿದೆ.

ಸಚಿವ ಸಂಪುಟ ಸಭೆಯಲ್ಲಿ ಸರ್ಕಾರಿ ನೌಕರರ ಬೇಡಿಕೆಯ ಕುರಿತು ಚರ್ಚಿಸಿ ಅಂದೇ ಮಹತ್ವದ ಘೋಷಣೆಯನ್ನು ಮಾಡಲಾಗುತ್ತದೆ ಎಂಬ ಸುದ್ದಿಗಳು ಹಬ್ಬಿವೆ. ಆದರೆ ಯಾವ ವಿಚಾರ ಚರ್ಚೆಗೆ ಬರಲಿದೆ? ಎಂಬುದು ಮಾತ್ರ ಇನ್ನೂ ತಿಳಿದುಬಂದಿಲ್ಲ. ಮಾರ್ಚ್ 2ನೇ ವಾರದಲ್ಲಿ ಲೋಕಸಭೆ ಚುನಾವಣೆ ದಿನಾಂಕ ಘೋಷಣೆಯಾಗಿ ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಗೆ ಬರಲಿದೆ. ಆಗ ಬಜೆಟ್ ಸಹ ಮುಗಿದಿರುತ್ತದೆ. ಆದ್ದರಿಂದ ಫೆಬ್ರವರಿಯಲ್ಲಿಯೇ ವೇತನ ಆಯೋಗದ ವರದಿ ಜಾರಿ ಕುರಿತು ಸರ್ಕಾರ ನಿರ್ಧಾರ ಪ್ರಕಟಿಸಬೇಕು ಎಂಬುದು ಸರ್ಕಾರಿ ನೌಕರರ ಬೇಡಿಕೆಯಾಗಿದೆ.


ಲೋಕಸಭೆ ಚುನಾವಣೆ ಬಳಿಕ ಸಾಲು ಸಾಲು ಚುನಾವಣೆಗಳು ಎದುರಾಗಲಿವೆ. ಆದ್ದರಿಂದ ರಾಜ್ಯ ಸರ್ಕಾರ ಕೆ. ಸುಧಾಕರ್ ರಾವ್ ಅಧ್ಯಕ್ಷತೆಯ 7ನೇ ರಾಜ್ಯ ವೇತನ ಆಯೋಗದ ವರದಿಯನ್ನು ಪಡೆದು ಅನುಷ್ಠಾನಗೊಳಿಸಲು ಚುನಾವಣಾ ಮಾದರಿ ನೀತಿ ಸಂಹಿತೆ ಅಡ್ಡಬರಲಿದೆ. ಅದಕ್ಕಾಗಿಯೇ ಈಗಾಗಲೇ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ತಾಲೂಕು, ಜಿಲ್ಲಾ ಮಟ್ಟದಲ್ಲಿ ಜನಪ್ರತಿನಿಧಿಗಳನ್ನು ಭೇಟಿ ಮಾಡಿ ವೇತನ ಆಯೋಗದ ವರದಿ ಜಾರಿಗಾಗಿ ಮನವಿಗಳನ್ನು ಸಲ್ಲಿಕೆ ಮಾಡುತ್ತಿದ್ದಾರೆ.

ಕರ್ನಾಟಕದಲ್ಲಿ ಬಿಜೆಪಿ ಸರ್ಕಾರವಿದ್ದಾಗ, ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿ ಮತ್ತು ಹಣಕಾಸು ಸಚಿವರಾಗಿದ್ದಾಗ ರಾಜ್ಯ ಸರ್ಕಾರಿ ನೌಕರರ ಬೇಡಿಕೆಯಂತೆ 7ನೇ ವೇತನ ಆಯೋಗ ರಚನೆ ಮಾಡಿದ್ದರು. ಈ ಕುರಿತು ದಿನಾಂಕ 9/11/2022ರ ಸರ್ಕಾರಿ ಆದೇಶ ಪ್ರಕಟಿಸಲಾಗಿತ್ತು. ಮೂವರು ಸದಸ್ಯರ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಲಾಗಿತ್ತು. ರಾಜ್ಯದಲ್ಲಿ ಮೇ ತಿಂಗಳಿನಲ್ಲಿ ವಿಧಾನಸಭೆ ಚುನಾವಣೆ ಮುಗಿದು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಎರಡು ಬಾರಿ ವೇತನ ಆಯೋಗದ ಅವಧಿ ವಿಸ್ತರಣೆ ಮಾಡಲಾಗಿದೆ.

ಸರ್ಕಾರಿ ನೌಕರರ ಬೇಡಿಕೆಯಂತೆ ಸರ್ಕಾರ 7ನೇ ವೇತನ ಆಯೋಗದ ಶಿಫಾರಸು ಜಾರಿಗೊಳಿಸಬೇಕಾದರೆ ಸರ್ಕಾರಕ್ಕೆ ಆರ್ಥಿಕ ಹೊರೆಯೂ ಉಂಟಾಗಲಿದೆ. ಶಿಫಾರಸು ಜಾರಿಯಿಂದ ವೇತನ, ಭತ್ಯೆ ಹೆಚ್ಚಳವಾಗಲಿದೆ. ಇದರಿಂದಾಗಿ ಸುಮಾರು 12 ಸಾವಿರ ಕೋಟಿ ರೂ. ಹೊರೆ ಎದುರಿಸಬೇಕಾಗಬಹುದು ಎಂದು ಆರ್ಥಿಕ ತಜ್ಞರು ಈಗಾಗಲೇ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

## ಜ.28 ರಂದು ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿ ಪರೀಕ್ಷೆ

ಬಳ್ಳಾರಿ: 2022-23ನೇ ಸಾಲಿನ ಮಿಕ್ಕುಳಿದ ವೃಂದ ಸಶಸ್ತ್ರ ಪೊಲೀಸ್ ಕಾನ್ಸ್ಟೇಬಲ್ (ಸಿಎಆರ್‌ಡಿಎಆರ್) (ಪುರುಷ ಮತ್ತು ತೃತೀಯ ಲಿಂಗ ಪುರುಷ) 3064 ಹುದ್ದೆಗಳ ನೇಮಕಾತಿಗೆ ಲಿಖಿತ ಪರೀಕ್ಷೆಯು ಜ.28 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 12.30 ರ ವರೆಗೆ ಬಳ್ಳಾರಿ ನಗರದ 16 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರು ಅವರು ತಿಳಿಸಿದ್ದಾರೆ.




***ಪರೀಕ್ಷಾ ಕೇಂದ್ರಗಳ ಹೆಸರು ಮತ್ತು ವಿಳಾಸ:***

ಗಾಂಧಿನಗರದ 2ನೇ ಕ್ರಾಸ್ನ ಬಾಲ ಭಾರತಿ ಶಾಲೆ, ಸಿರುಗುಪ್ಪ ರಸ್ತೆಯ ಕುರಿಹಟ್ಟಿಯ ಬಳ್ಳಾರಿ ಬ್ಯುಸಿನೆಸ್ ಕಾಲೇಜ್, ಅನಂತಪುರ ರಸ್ತೆಯ ಪಟೇಲ್ ನಗರದ ಬಸವರಾಜೇಶ್ವರಿ ಪಬ್ಲಿಕ್ ಶಾಲೆ ಮತ್ತು ಕಾಲೇಜು, ಅಲ್ಲೀಪುರದ ಬಳ್ಳಾರಿ ಇಂಡಿಪೆಂಡೆಂಟ್ ಪಿಯು ಕಾಲೇಜ್(ಬೆಸ್ಟ್), ಶಾಸ್ತ್ರಿ ನಗರದ ಶೆಟ್ಟರ ಗುರುಶಾಂತಪ್ಪ ಪಿಯು ಕಾಲೇಜು, ಪಟೇಲ್ ನಗರದ ನಂದಿ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಅಂಡ್ ಸೈನ್ಸ್ ಕಾಲೇಜು, ಕಂಟೋನ್ಮೆಂಟ್ನ ರಾವ್ ಬಹದ್ದೂರ್ ವೈ ಮಹಾಬಲೇಶ್ವರ ಇಂಜಿನಿಯರಿಂಗ್ ತಾಂತ್ರಿಕ ಮಹಾವಿದ್ಯಾಲಯ, ಕೋಟೆ ಪ್ರದೇಶದ ಶ್ರೀ ಮೇಧಾ ಡಿಗ್ರಿ ಕಾಲೇಜು, ಎಸ್.ಎನ್.ಪೇಟೆಯ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರ್ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಅಲ್ಲಂ ಸುಮಂಗಳಮ್ಮ ಮೆಮೊರೀಯಲ್ ಮಹಿಳೆಯರ ಕಾಲೇಜು, ಕಾಳಮ್ಮ ರಸ್ತೆಯ ವಾಡ್ಡಾ ಪಿಯು ಕಾಲೇಜು, ಗಾಂಧಿನಗರದ ಟೆಕೂರ್ ಕಾಂಪೌಂಡ್ನ ಕೆಹೆಚ್ಬಿ ಕಾಲೋನಿಯ ಸುಕೃತ ನರ್ಸಿಂಗ್ ಹೋಮ್ನ ಎಸ್ಜಿಟಿ ಕಾಲೇಜು, ಅಂಚೆ ಕಚೇರಿ ಹತ್ತಿರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಕಂಟೋನ್ಮೆಂಟ್ ಪ್ರದೇಶದ ವೀರಶೈವ ಕಾಲೇಜು, ಕೋಟೆ ಪ್ರದೇಶದ ಸೆಂಟ್ ಜಾನ್ಸ್ ಪದವಿ ಪೂರ್ವ ಕಾಲೇಜು ಹಾಗೂ ಕೋಟೆ ಪ್ರದೇಶದ ಸೆಂಟ್ ಜಾನ್ಸ್ ಹೈಸ್ಕೂಲ್.

ಅರ್ಹ ಅಭ್ಯರ್ಥಿಗಳು ವೆಬ್ಸೈಟ್ನಿಂದ ಲಿಖಿತ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪಡೆದುಕೊಂಡು, ಯಾವುದಾದರೊಂದು ಮೂಲ ಗುರುತಿನ ಚೀಟಿಯನ್ನು ತಪ್ಪದೇ ಪರೀಕ್ಷೆಯಲ್ಲಿ ಹಾಜರುಪಡಿಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ತರಹದ ವಿದ್ಯುನ್ಮಾನ ಮತ್ತು ಇತರೆ ಉಪಕರಣಗಳನ್ನು ಕಡ್ಡಾಯವಾಗಿ ನಿರ್ಬಂಧಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೊನೆಗೂ ಸೆರೆ ಸಿಕ್ಕ ತಣ್ಣೀರ್: ನಿಟ್ಟುಸಿರು ಬಿಟ್ಟ ರೈತರು



ಹಾಸನ: ಎಲಿಫೆಂಟ್ ಹಂಟಿಂಗ್ ಟೀಂ ತಣ್ಣೀರ್ ಎಂಬ ಹೆಸರಿನ ಬೃಹತ್ ಗಾತ್ರದ ಸಲಗವನ್ನು ಸೆರೆ ಹಿಡಿದಿದ್ದಾರೆ.

ಹಾಸನ ಜಿಲ್ಲೆ ಬೇಲೂರು ತಾಲ್ಲೂಕಿನ ಚಿಕ್ಕೋಟೆ ಗ್ರಾಮದಲ್ಲಿ ಬೃಹತ್ ಸಲಗ ಅರಣ್ಯ ಇಲಾಖೆ ಸಿಬ್ಬಂದಿಗೆ ಸೆರೆಸಿಕ್ಕಿದೆ.

ಅರಣ್ಯ ಇಲಾಖೆ ಸಿಬ್ಬಂದಿ ಬೆಳಿಗ್ಗೆ ಐದು ಗಂಟೆಗೆ ಬಂದು ಕಾಡಾನೆ ಇರುವ ಜಾಗ ಪತ್ತೆ ಮಾಡಿದ್ದರು. ಬಳಿಕ ಕಾಡಾನೆ ಸೆರೆ ತಂಡ ಹತ್ತು ಗಂಟೆಗೆ ಕಾರ್ಯಾಚರಣೆ ಆರಂಭಿಸಿದರು.

ಇದೀಗ ರೈತರಿಗೆ ಉಪಟಳ ನೀಡುತ್ತಿದ್ದ ಒಂಟಿಸಲಗವನ್ನು ಅರಣ್ಯ ಇಲಾಖೆ ಸಿಬ್ಬಂದಿಗಳು ಸೆರೆ ಹಿಡಿದಿದ್ದಾರೆ.

ಪ್ರಾರಂಭದಲ್ಲಿ ಅರವಳಿಕೆ ಚುಚ್ಚುಮದ್ದು ನೀಡಿದರು ಕಾಡಾನೆ ತಣ್ಣೀರ್ ಪ್ರಜ್ಞೆ ತಪ್ಪಿ ಬೀಳಲಿಲ್ಲ. ಒಂದು ಗಂಟೆ ಕಾಲ ತಣ್ಣೀರ್ ಮನಸ್ಸೋ ಇಚ್ಛೆ ಓಡಾಡಿದೆ. ನಂತರ ಕಾಫಿ ತೋಟದಲ್ಲಿ ಪ್ರಜ್ಞೆ ತಪ್ಪಿ ಬಿದ್ದಿದೆ.

ಬಳಿಕ ಅರಣ್ಯ ಇಲಾಖೆ ಸಿಬ್ಬಂದಿ ಎಂಟು ಸಾಕಾನೆಗಳೊಂದಿಗೆ ಹರಸಾಹಸಪಟ್ಟು ರಸ್ತೆಗೆ ಕರೆ ತಂದಿದ್ದಾರೆ. ಅರಣ್ಯ ಇಲಾಖೆ ಕಾಡಾನೆಗೆ ರೇಡಿಯೋ ಕಾಲರ್ ಅಳವಡಿಸಿ ಸ್ಥಳಾಂತರ ಮಾಡಲಿದ್ದಾರೆ.

## ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ ಪುಸ್ತಕ ಬಹುಮಾನಕ್ಕಾಗಿ ಕೃತಿಗಳ ಆಹ್ವಾನ

ಬಳ್ಳಾರಿ: ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ ಪ್ರತಿ ವರ್ಷದಂತೆ 2022ನೆಯ ವರ್ಷದ ಪುಸ್ತಕ ಬಹುಮಾನ ಯೋಜನೆಗಾಗಿ ವಿವಿಧ ಪ್ರಕಾರಗಳ ಕನ್ನಡ ಪುಸ್ತಕಗಳನ್ನು ಸಲ್ಲಿಸಲು ಅರ್ಜಿ ಆಹ್ವಾನಿಸಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಕರಿಯಪ್ಪ. ಎನ್ ಅವರು ತಿಳಿಸಿದ್ದಾರೆ.

ಪ್ರತಿ ಪ್ರಕಾರದಲ್ಲಿ ವಿಮರ್ಶಕರು ಆಯ್ಕೆ ಮಾಡುವ ಒಂದು ಕೃತಿಗೆ ಬಹುಮಾನ ನೀಡಲಾಗುವುದು. ಬಹುಮಾನಕ್ಕೆ ಸಲ್ಲಿಸುವ ಕೃತಿಗಳು 2022ರ ಜನವರಿ 01 ರಿಂದ 2022ರ ಡಿಸೆಂಬರ್ 31 ರೊಳಗೆ ಪ್ರಥಮ ಆವೃತ್ತಿಯಾಗಿ ಪ್ರಕಟವಾಗಿರುವ ಕೃತಿಗಳಾಗಿರಬೇಕು. ಕೃತಿಯಲ್ಲಿ ಪ್ರಥಮ ಮುದ್ರಣ 2022 ಎಂದು ಮುದ್ರಿತವಾಗಿರಬೇಕು.

**ವಿವಿಧ ಪ್ರಕಾರಗಳ ಪುಸ್ತಕಗಳು:**

ಕಾವ್ಯ (ವಚನಗಳು ಮತ್ತು ಹನಿಗವನಗಳು ಸೇರಿ), ನವಕವಿಗಳ ಪ್ರಥಮ ಕವನಸಂಕಲನ (ದೃಢೀಕರಣ ಪತ್ರದೊಂದಿಗೆ), ಕಾವ್ಯ ಹಸ್ತಪ್ರತಿ (30 ವರ್ಷ ಒಳಗಿನ ಯುವಕವಿಗಳ ಅಪ್ರಕಟಿತ ಕವನ ಸಂಕಲನದ ಹಸ್ತಪ್ರತಿಯನ್ನು ಕಳಿಸಿಕೊಡಬೇಕು (ಚಿ.ಶ್ರೀನಿವಾಸರಾಜು ದತ್ತಿನಿಧಿ ಬಹುಮಾನಕ್ಕಾಗಿ), ಕಾದಂಬರಿ (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಚದುರಂಗ ದತ್ತಿನಿಧಿ ಬಹುಮಾನಗಳಿಗಾಗಿ), ಸಣ್ಣಕತೆ, ನಾಟಕ, ಲಲಿತ ಪ್ರಬಂಧ (ಹರಟೆ ಮತ್ತು ವಿನೋದ ಸಾಹಿತ್ಯ ಸೇರಿ) (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ವಿ.ಸೀತಾರಾಮಯ್ಯ ಸೋದರಿ ಇಂದಿರಾ ದತ್ತಿನಿಧಿ ಬಹುಮಾನಗಳಿಗಾಗಿ), ಪ್ರವಾಸ ಸಾಹಿತ್ಯ, ಜೀವನಚರಿತ್ರೆ / ಆತ್ಮಕಥೆ (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಸಿಂಪಿ ಲಿಂಗಣ್ಣ ದತ್ತಿನಿಧಿ ಬಹುಮಾನಗಳಿಗಾಗಿ), ಸಾಹಿತ್ಯ ವಿಮರ್ಶೆ (ಸಾಹಿತ್ಯ ಚರಿತ್ರೆ, ಸಾಹಿತ್ಯತತ್ವ ಮತ್ತು ಸೌಂದರ್ಯ ಮೀಮಾಂಸೆ ಸೇರಿ) (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಪಿ. ಶ್ರೀನಿವಾಸರಾವ್ ದತ್ತಿನಿಧಿ ಬಹುಮಾನಗಳಿಗಾಗಿ), ಗ್ರಂಥ ಸಂಪಾದನೆ (ಪ್ರಾಚೀನ ಕೃತಿಗಳ ಸಂಪಾದನೆ), ಮಕ್ಕಳ ಸಾಹಿತ್ಯ, ವಿಜ್ಞಾನ ಸಾಹಿತ್ಯ (ಭೌತ, ರಸಾಯನ, ಗಣಿತ, ಪ್ರಾಣಿ, ಸಸ್ಯ, ಇಂಜಿನಿಯರಿಂಗ್, ವೈದ್ಯ, ಭೂ, ಖಗೋಳ, ಗೃಹವಿಜ್ಞಾನ, ಪರಿಸರ), ಮಾನವಿಕ (ಜಾನಪದ, ಇತಿಹಾಸ, ರಾಜ್ಯಶಾಸ್ತ್ರ, ಸಮಾಜಶಾಸ್ತ್ರ, ಮಾನವಶಾಸ್ತ್ರ, ಮನಃಶಾಸ್ತ್ರ, ಭಾಷಾಶಾಸ್ತ್ರ, ಶಿಕ್ಷಣ, ವಾಣಿಜ್ಯ, ಕಾನೂನು, ಗ್ರಂಥಭಂಡಾರ ವಿಜ್ಞಾನ, ಸಮೂಹಸಂವಹನ, ಧಾರ್ಮಿಕ, ದಾರ್ಶನಿಕ) ಸಂಶೋಧನೆ (ಕನ್ನಡ ಭಾಷೆ ಸಾಹಿತ್ಯ ಮತ್ತು ಸಂಬಂಧಿಸಿದ ಸಂಶೋಧನೆ), ವೈಚಾರಿಕ/ ಅಂಕಣ ಬರಹ (ಅಕಾಡೆಮಿ ಮಸ್ತಕ ಬಹುಮಾನ ಹಾಗೂ ಬಿ.ವಿ. ವೀರಭದ್ರಪ್ಪ ದತ್ತಿನಿಧಿ ಬಹುಮಾನಗಳಿಗಾಗಿ), ಅನುವಾದ-1 (ಇಂಗ್ಲೀಷ್ ಸೇರಿದಂತೆ ಭಾರತೀಯ ಭಾಷೆಯಿಂದ ಕನ್ನಡಕ್ಕೆ ಅನುವಾದಗೊಂಡ (ಸೃಜನ/ಸೃಜನೇತರ ಕೃತಿಗಳು) (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಎಲ್.ಗುಂಡಪ್ಪ ಮತ್ತು ಶಾರದಮ್ಮ ದತ್ತಿನಿಧಿ ಬಹುಮಾನಗಳಿಗಾಗಿ), ಅನುವಾದ-2 (ಕನ್ನಡದಿಂದ ಅನ್ಯಭಾಷೆಗಳಿಗೆ ಅನುವಾದಗೊಂಡ ಸೃಜನ /ಸೃಜನೇತರ ಕೃತಿ), ಲೇಖಕರ ಮೊದಲ ಸ್ವತಂತ್ರಕೃತಿ (2022ರಲ್ಲಿ ಮುದ್ರಣಗೊಂಡ ಮೊದಲ ಸ್ವತಂತ್ರಕೃತಿ. ಖಾತರಿಪಡಿಸಲು ದೃಢೀಕರಣ ಪತ್ರ ಲಗತ್ತಿಸಬೇಕು) (ಅಕಾಡೆಮಿ ಪುಸ್ತಕ ಬಹುಮಾನ ಹಾಗೂ ಮಧುರಚೆನ್ನ ದತ್ತಿನಿಧಿ ಬಹುಮಾನಗಳಿಗಾಗಿ), ಕನ್ನಡದಿಂದ ಇಂಗ್ಲಿಷಿಗೆ ಅನುವಾದ (ಅಮೆರಿಕನ್ನಡ ದತ್ತಿನಿಧಿ ಬಹುಮಾನಕ್ಕಾಗಿ), ದಾಸ ಸಾಹಿತ್ಯ (ದಾಸ ಸಾಹಿತ್ಯ ಕುರಿತ ಸೃಜನ/ಸೃಜನೇತರ ಕೃತಿಗಳು) (ಶ್ರೀಮತಿ ಜಲಜಾ ಶ್ರೀಪತಿ ಆಚಾರ್ಯಗಂಗೂರ್ ದತ್ತಿನಿಧಿ ಬಹುಮಾನಕ್ಕಾಗಿ), ಸಂಕೀರ್ಣ (ಮೇಲಿನ ಯಾವುದೇ ಪ್ರಕಾರಕ್ಕೆ ಹೊಂದಿಕೊಳ್ಳದ ವಿಶಿಷ್ಟ ಕೃತಿಗಳು)

**ಬಹುಮಾನಕ್ಕಾಗಿ ಪರಿಗಣಿಸಲ್ಪಡದ ಕೃತಿಗಳು:**

ಮರುಮುದ್ರಣವಾದ ಪುಸ್ತಕಗಳು, ಪಿಎಚ್.ಡಿ ಪದವಿಗಾಗಿ ಸಿದ್ಧಪಡಿಸಿದ ಸಂಶೋಧನಾ ಗ್ರಂಥಗಳು, ಪಠ್ಯಪುಸ್ತಕಗಳು, ಅಕಾಡೆಮಿಯ ಗೌರವ ಪ್ರಶಸ್ತಿ ಸಾಹಿತಿಗಳ ಕೃತಿಗಳು, ಈಗಾಗಲೇ ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ ಒಟ್ಟಾರೆ ಮೂರು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳು, ಒಂದು ಪ್ರಕಾರದಲ್ಲಿ ಒಂದು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳನ್ನು ಮತ್ತದೇ ಪ್ರಕಾರದಲ್ಲಿ ಮುಂದಿನ ಮೂರು ವರ್ಷದವರೆಗೆ ಪರಿಗಣಿಸುವುದಿಲ್ಲ.

ಒಬ್ಬ ಲೇಖಕರಿಗೆ ಮೂರು ಬಾರಿ ಬೇರೆ ಬೇರೆ ಪ್ರಕಾರಗಳಲ್ಲಿ ಬಹುಮಾನ ಪಡೆಯುವ ಅವಕಾಶವಿದೆ.

ಮೇಲ್ಕಂಡ ಅವಧಿಯಲ್ಲಿ ಪ್ರಕಟವಾದ ಪುಸ್ತಕಗಳ ತಲಾ 4 ಪ್ರತಿಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು-560002 ಇವರಿಗೆ ರಿಜಿಸ್ಟರ್ಡ್ ಅಂಚೆ/ಕೊರಿಯರ್ ಮೂಲಕ ಅಥವಾ ಖುದ್ದಾಗಿ 2024ರ ಫೆಬ್ರವರಿ 20 ರೊಳಗೆ ತಲುಪಿಸಬೇಕು.

ಬಹುಮಾನಕ್ಕಾಗಿ ಕಳುಹಿಸುವ ಕೃತಿಯ ಮೇಲೆ ತಿಳಿಸಿದ ಪ್ರಕಾರಗಳಲ್ಲಿ ಯಾವ ಸಾಹಿತ್ಯ ಪ್ರಕಾರಕ್ಕೆ ಸೇರುತ್ತದೆ ಎನ್ನುವುದನ್ನು ಸ್ಪಷ್ಟವಾಗಿ ಪುಸ್ತಕದ ಶೀರ್ಷಿಕೆ ಪುಟದಲ್ಲಿ ಬರೆದಿರಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ-2024

### ಶಿವಯೋಗಿ ಸಿದ್ದರಾಮೇಶ್ವರರು ಶರಣ ಸಂಸ್ಕೃತಿಯ ಪಂಚ ಹರಿಕಾರ: ಡಾ. ಸುಬ್ಬರಾವ್ ಎಂಟೆತ್ತಿನವರ

ಬೆಳಗಾವಿ: ಶಿವಯೋಗಿ ಸಿದ್ದರಾಮೇಶ್ವರರು ಕೇವಲ ಶಿವಯೋಗಿ ಮಾತ್ರವಲ್ಲ, ಕಾಯಕ ಯೋಗಿಯಾಗಿ ಕಾಯಕದಿಂದ ಬಂದಿದ್ದನ್ನು ಸ್ವೀಕರಿಸಿ ಅದರಲ್ಲಿ ಉಳಿದಿದ್ದನ್ನು ದಾಸೋಹ ಮಾಡುವಂತೆ ಕರೆ ಕೊಟ್ಟವರು. ಸಿದ್ದರಾಮೇಶ್ವರರು ಸಮಾಜದ ಒಳಿತಿಗೆ ನಿರಂತರ ಶ್ರಮಿಸಿದ ಶರಣರು ಎಂದು ಡಾ. ಸುಬ್ಬರಾವ್ ಎಂಟೆತ್ತಿನವರ ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಸಂಯುಕ್ತಾಶ್ರಯದಲ್ಲಿ ಮಂಗಳವಾರ (ಜ.16) ನಡೆದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಉತ್ಸವ ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿದರು.

ಸಿದ್ದರಾಮೇಶ್ವರರು ಶರಣ ಸಂಸ್ಕೃತಿಯ ಪಂಚ ಹರಿಕಾರರೆಂದೇ ಹೆಸರಾದವರು. ಕಾಯಕಯೋಗಿ, ಶಿವಯೋಗಿ, ಕರ್ಮಯೋಗಿ ಸಮಾಜದಲ್ಲಿ ಪ್ರಸಿದ್ಧಿಯಾಗಿದವರು ಎಂದು ತಿಳಿಸಿದರು.

ಸಮಾಜದ ಒಳಿತಿಗೆ, ಜನರ ಅನುಕೂಲಕ್ಕಾಗಿ 12ನೇ ಶತಮಾನದಲ್ಲಿ ಕೆರೆ- ಕಟ್ಟೆ ಕಟ್ಟಿಸಿದರು. ಸಮಾಜದ ಒಳಿತಿಗಾಗಿ ಮಠವನ್ನು ಕಟ್ಟುತ್ತಾರೆ. ತಮ್ಮ ಜೀವನವನ್ನೇ ಜನರ ಸೇವೆಗಾಗಿ ಮುಡುಪಾಗಿಟ್ಟು, ಹಳ್ಳಿಗಳ ಉದ್ಧಾರಕ್ಕಾಗಿ ಮುಂದಾದವರು ಶ್ರೀ ಶಿವಯೋಗಿ ಸಿದ್ದರಾಮೇಶ್ವರರು ಎಂದು ಡಾ. ಸುಬ್ಬರಾವ್ ಎಂಟೆತ್ತಿನವರ ಅವರು ಉಪನ್ಯಾಸ ನೀಡಿದರು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಹೆಚ್ಚುವಾರಿ ಪೊಲೀಸ್ ವರಿಷ್ಠಾಧಿಕಾರಿ ವೇಣುಗೋಪಾಲ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಸಮಾಜದ ಮುಖಂಡರಾದ ಎಲ್.ಜಿ ಗಾಡಿವಡ್ಡರ, ಕೆ.ಎಸ್ ಮಮದಾಪುರ, ಪರಶುರಾಮ ಕಲಘಟಗಿ, ಆರ್, ಬಿ ಬಂಡಿವಡ್ಡರ್, ಗಂಗಾರಾಮ್, ಶಿವಾಜಿ ವಡ್ಡರ, ಚೌಡಪ್ಪ ವಡ್ಡರ, ಶಿವಾಜಿ ಹಿಂಡಲಗೇಕರ, ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು.

## ಡಿಕೆಶಿಯನ್ನ ಹಾಡಿ ಹೊಗಳಿದ ಅಶ್ವತ್ಥ್ ನಾರಾಯಣ

ಬೆಂಗಳೂರು: ಡಿ.ಕೆ ಶಿವಕುಮಾರ್ ಅವರು ಮುಖ್ಯಮಂತ್ರಿ ಆಗಲಿ ಎಂದು ಮಾಜಿ ಡಿಸಿಎಂ ಅಶ್ವಥ್ ನಾರಾಯಣ್ ಶುಭ ಹಾರೈಸಿದ್ದಾರೆ.

ಶೇಷಾದ್ರಿಪುರಂ ಗುಂಡೂರಾವ್ ಕ್ರೀಡಾಂಗಣದಲ್ಲಿ ಪಶ್ಚಿಮ ವಲಯದ ಮಲ್ಲೇಶ್ವರಂ, ಗಾಂಧಿನಗರ ಮತ್ತು ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರಗಳನ್ನ ಒಟ್ಟುಗೂಡಿಸಿಕೊಂಡು ಜನಸ್ಪಂದನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಅಶ್ವಥ್ ನಾರಾಯಣ್ ಅವರು ವೇದಿಕೆ ಮೇಲೆಯೇ ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿ ಆಗಲಿ ಅಂತಾ ಆಶಿಸಿದರು.

ಜನರನ್ನ ನೇರವಾಗಿ ತಲುಪುವ ಕೆಲಸವನ್ನು ಡಿಕೆ ಶಿವಕುಮಾರ್ ಅವರು ಮಾಡುತ್ತಿದ್ದಾರೆ. ಅವರಿಗೆ ಈಗ ಡಿಸಿಎಂ ಸ್ಥಾನ ಕೊಟ್ಟಿದ್ದಾರೆ. ಇನ್ನಷ್ಟು ಎತ್ತರಕ್ಕೆ ಬೆಳೆಯಲಿ ಅಂತಾ ಆಶಿಸುತ್ತಾ ಮುಂದಿನ ದಿನಗಳಲ್ಲಿ ಉನ್ನತ ಮಟ್ಟಕ್ಕೆ ಹೋಗಿ ಮುಖ್ಯಮಂತ್ರಿ ಕೂಡ ಆಗಲಿ ಎಂದು ಶುಭ ಹಾರೈಸಿದರು.

ಕರ್ನಾಟಕ ಸರ್ಕಾರ ಉತ್ತಮವಾದ ಕಾರ್ಯಕ್ರಮ ರೂಪಿಸಿದೆ. ನಮ್ಮ ಪಶ್ಚಿಮ ವಲಯದಲ್ಲಿ ನಡೆಯುತ್ತಿದೆ. ಡಿಕೆ ಶಿವಕುಮಾರ್ ಅವರ ನಾಯಕತ್ವದಲ್ಲಿ ಕಾರ್ಯಕ್ರಮ ರೂಪಿಸಿದ್ದಾರೆ. ಜನರ ಕುಂದುಕೊರತೆಗಳನ್ನ ಆಲಿಸುತ್ತಾ ಇದ್ದಾರೆ ಅವರಿಗೆ ಹೃತ್ಪೂರ್ವಕವಾದ ಧನ್ಯವಾದ ಸಲ್ಲಿಸುವುದಾಗಿ ಹೇಳಿದರು.



ಬೆಂಗಳೂರು ನಗರ ಭರವಸೆ ನಗರ. ಬದುಕು ಕಟ್ಟಿಕೊಳ್ಳೋಕೆ ಈ ಕನಸಿನ ನಗರದಲ್ಲಿ ಹಲವಾರು ವರ್ಷಗಳಿಂದ ನೆಲೆಸಿದ್ದಾರೆ. ಬಹುದೊಡ್ಡ ಕೀರ್ತಿ ಈ ನಗರಕ್ಕೆ ಇದೆ. ಅದೇ ರೀತಿ ಕೊರತೆ ಕೂಡ ಇದೆ. ಬೆಂಗಳೂರು ನಗರದಲ್ಲಿ ಶ್ರಮಿಕರು ತುಂಬಾ ಜನ ಇದ್ದಾರೆ, ಬಡವರೂ ಇದ್ದಾರೆ, ಅವರ ಕೈ ಹಿಡಿಯುವಂತಹ ಕೆಲಸ ಡಿಕೆ ಶಿವಕುಮಾರ್ ಮಾಡಲಿ. ವಸತಿ ಸೌಲಭ್ಯಕ್ಕೆ ಹೆಚ್ಚಿನ ಆದ್ಯತೆ ಕೊಡಿ ಎಂದು ಮಾಜಿ ಡಿಸಿಎಂ ಆಗ್ರಹಿಸಿದರು.

ಇದೇ ವೇಳೆ ಆಸ್ತಿ ತೆರಿಗೆ ಬಗ್ಗೆ ಪ್ರಸ್ತಾಪ ಮಾಡಿದ ಅಶ್ವಥ್ ನಾರಾಯಣ್, ಹಳೆಯ ಬಾಕಿ ಎಲ್ಲಾ ಸೇರಿ ಆಸ್ತಿ ತೆರಿಗೆ ವಸೂಲಿ ಮಾಡುತ್ತಿದ್ದಾರೆ. ಹೀಗಾಗಿ ಆಸ್ತಿ ತೆರಿಗೆ ಬಗ್ಗೆ ಗಮನ ಹರಿಸಿ. ಮೂರು ವರ್ಷ ಮುಂಚಿತವಾದ ಆಸ್ತಿ ತೆರಿಗೆ ಕಟ್ಟುವುದಕ್ಕೆ ವಿನಾಯಿತಿ ಕೊಡಿ. ಜನರಿಗೆ ಆಸ್ತಿ ತೆರಿಗೆ ನೋಟಿಸ್ ಕೊಡುತ್ತಿದ್ದಾರೆ. ಅಧಿಕಾರಿಗಳ ಜೊತೆ ಮಾತಾಡಿ ಆಸ್ತಿ ತೆರಿಗೆ ಕಡಿಮೆ ಮಾಡಲಿ ಎಂದರು.

ಟ್ರಾಫಿಕ್ ಸಮಸ್ಯೆ ನಿವಾರಣೆಗೆ ಮಿನಿ ಬಸ್ಗಳಿಗೆ ಹೆಚ್ಚು ಆದ್ಯತೆ ಕೊಡಿ. ಫುಟ್ ಪಾತ್ ಗಳನ್ನ ಒತ್ತುವರಿ ಮಾಡುತ್ತಿದ್ದಾರೆ. ಫುಟ್ ಪಾತ್ ಗಳನ್ನ ತೆರವು ಮಾಡುವ ಕೆಲಸ ಮಾಡಿದ್ದೀರಿ. ವಯಸ್ಸಾದವರು ಯಾರೂ ಫುಟ್ಪಾತ್ನಲ್ಲಿ ಓಡಾಡೋಕೆ ಆಗ್ತಿಲ್ಲ. ನಾಗರೀಕರು ಫುಟ್ ಪಾತ್ ಮೇಲೆ ಓಡಾಡುವಂತೆ ಮಾಡಿ ಎಂದು ಹೇಳಿದರು.

ನಮ್ಮ ಬೆಂಗಳೂರಿನಲ್ಲಿ ಇರುವ ಶಾಲೆಗಳಿಗೆ ಹೆಚ್ಚಿನ ವ್ಯವಸ್ಥೆ ಮಾಡಿಕೊಡಿ. ಇನ್ನಷ್ಟು ಶಾಲೆಗಳನ್ನ ಹೆಚ್ಚಿಸಿ. ಕೆಲ ವಿಧಾನಸಭಾ ಕ್ಷೇತ್ರಗಳಲ್ಲಿ ಕಾಲೇಜ್ ಇಲ್ಲ, ಪಾಲಿಟೆಕ್ನಿಕ್ ಗಳೂ ಇಲ್ಲ, ಅವುಗಳನ್ನು ಓಪನ್ ಮಾಡುವಂತ ಕೆಲಸ ಮಾಡಿ. ಪೌರ ಕಾರ್ಮಿಕರ ಕೊರತೆ ಬಗ್ಗೆ ಪ್ರಸ್ತಾಪಿಸಿ, ಪೌರಕಾರ್ಮಿಕರನ್ನ ನೇಮಕ ಮಾಡಿಕೊಳ್ಳಿ. ಪೌರ ಕಾರ್ಮಿಕರ ಸಮಸ್ಯೆ ನಿವಾರಿಸಿ ಎಂದರು.

## 2023 ರಲ್ಲಿ ಕೊಡಗಿಗೆ ಭೇಟಿ ನೀಡಿದ ಪ್ರವಾಸಿಗರ ಸಂಖ್ಯೆ ಶೇ. 38 ರಷ್ಟು ಹೆಚ್ಚಳ




ಮಡಿಕೇರಿ: ಕೊಡಗು ಪ್ರವಾಸೋದ್ಯಮ ಇಲಾಖೆ ಬಿಡುಗಡೆ ಮಾಡಿರುವ ಅಂಕಿಅಂಶಗಳ ಪ್ರಕಾರ 2023ರಲ್ಲಿ ಕೊಡಗಿಗೆ ಭೇಟಿ ನೀಡಿದ ಪ್ರವಾಸಿಗರ ಸಂಖ್ಯೆಯಲ್ಲಿ ಶೇ.38ರಷ್ಟು ಏರಿಕೆಯಾಗಿದೆ. 2022ರಲ್ಲಿ ಕೊಡಗಿಗೆ ಭೇಟಿ ನೀಡಿದ ಪ್ರವಾಸಿಗರ ಸಂಖ್ಯೆಗೆ ಹೋಲಿಸಿದರೆ ಶೇ 38 ರಷ್ಟು ಹೆಚ್ಚಳವಾಗಿದೆ. 2022 ರಲ್ಲಿ 27,29,711 ಪ್ರವಾಸಿಗರು ಕೊಡಗಿಗೆ ಭೇಟಿ ನೀಡಿದ್ದ, 2023ರಲ್ಲಿ 43,69,507 ಪ್ರವಾಸಿಗರು ಭೇಟಿ ನೀಡಿದ್ದಾರೆ.

ನೈಸರ್ಗಿಕ ವಿಕೋಪಗಳು ಮತ್ತು ಸಾಂಕ್ರಾಮಿಕ ಪರಿಸ್ಥಿತಿಯ ನಂತರ, ಪ್ರವಾಸೋದ್ಯಮ ಕ್ಷೇತ್ರ ಕ್ರಮೇಣ ಚೇತರಿಸಿಕೊಳ್ಳುತ್ತಿದೆ.

2018ರ ನಂತರ ಕಳೆದ ವರ್ಷ ಅತಿ ಹೆಚ್ಚು ಪ್ರವಾಸಿಗರು ಭೇಟಿ ನೀಡಿದ್ದಾರೆ ಮತ್ತು ಡಿಸೆಂಬರ್ 2023 ರಲ್ಲಿ ಒಟ್ಟು 5,82,906 ಪ್ರವಾಸಿಗರು ಜಿಲ್ಲೆಯ ಪ್ರವಾಸಿ ತಾಣಗಳಿಗೆ ಭೇಟಿ ನೀಡಿದ್ದಾರೆ.

ಜನವರಿ 12 ರವರೆಗಿನ ಹೊಸ ವರ್ಷದ ಅವಧಿಯಲ್ಲಿ 6,20,808 ಪ್ರವಾಸಿಗರು ಕೊಡಗಿಗೆ ಭೇಟಿ ನೀಡಿದ್ದಾರೆ. ಇಲಾಖೆಯ ಸಮೀಕ್ಷೆಯ ಪ್ರಕಾರ, ಆನ್‌ಲೈನ್‌ನಲ್ಲಿ ಹೆಚ್ಚು ಹುಡುಕಲ್ಪಟ್ಟ ಪ್ರವಾಸಿ ತಾಣಗಳ ಪಟ್ಟಿಯಲ್ಲಿ ಕೊಡಗು ಮೂರನೇ ಸ್ಥಾನದಲ್ಲಿದೆ.

## ಗಣರಾಜ್ಯೋತ್ಸವಕ್ಕೆ ಬೆಂಗಳೂರಿನ ವಿಜಯನಗರದಲ್ಲಿ ಪ್ರಮುಖ 215 ಅಡಿ ಎತ್ತರದ ಧ್ವಜಸ್ತಂಭ ಸ್ಥಾಪನೆ



ಬೆಂಗಳೂರು: ಈ ಬಾರಿಯ ಗಣರಾಜ್ಯೋತ್ಸವ ದಿನ ನಗರದ ಮೇಲೆ ತ್ರಿವರ್ಣ ಧ್ವಜ ಹಾರಾಡಲಿದೆ. ವಿಜಯನಗರದಲ್ಲಿ 215 ಅಡಿ ಎತ್ತರದ ಧ್ವಜಸ್ತಂಭ ತಲೆ ಎತ್ತಲಿದ್ದು, ಜನವರಿ 26ರಂದು ಅದು ಸ್ಟಾರ್ ಆಕರ್ಷಣೆಯಾಗುವ ನಿರೀಕ್ಷೆ ಇದೆ.

ಕಾಮಗಾರಿ ನಿರ್ವಹಿಸುತ್ತಿರುವ ಗುತ್ತಿಗೆದಾರ ಹೇಮಂತ್ ಎಚ್.ಜಿ, ಮಾಜಿ ಸಚಿವ ಹಾಗೂ ವಿಜಯನಗರ ಶಾಸಕ ಎಂ.ಕೃಷ್ಣಪ್ಪ ಅವರು ಶಾಸಕರ ಅನುದಾನದಲ್ಲಿ ಯೋಜನೆಗೆ ಹಣ ನೀಡಿದ್ದಾರೆ. ಚಂದ್ರಾ ಲೇಔಟ್‌ನಲ್ಲಿ ಸ್ಥಾಪಿಸಲಾಗಿರುವ ಧ್ವಜ ಸ್ತಂಭವು 210 ಅಡಿ ಎತ್ತರವಿದ್ದು, ಮೇಲ್ಭಾಗದಲ್ಲಿ 5 ಅಡಿ ಅಶೋಕ ಲಾಂಛನವಿದೆ ಎಂದು ಹೇಳಿದರು.

ರಾಷ್ಟ್ರೀಯ ಧ್ವಜ ಸಂಹಿತೆಯ ಪ್ರಕಾರ ತ್ರಿವರ್ಣ ಧ್ವಜವನ್ನು ಹಾರಿಸುವುದು ಮತ್ತು ಇಳಿಸುವುದು ಮತ್ತು ಪ್ರತಿ ಎರಡು ತಿಂಗಳಿಗೊಮ್ಮೆ ಧ್ವಜವನ್ನು ಬದಲಾಯಿಸಲಾಗುತ್ತದೆ. ಗಾಳಿಯಿಂದಾಗಿ, ಧ್ವಜವು ಹಾನಿಗೊಳಗಾಗಬಹುದು ಅಥವಾ ಹರಿದಿರಬಹುದು. ಅದನ್ನು ಹೊಸದರೊಂದಿಗೆ ಬದಲಾಯಿಸಲಾಗುತ್ತದೆ. ಧ್ವಜವನ್ನು ಏರಿಸಲು ಮತ್ತು ಇಳಿಸಲು, ಕೈಯಿಂದ ಮಾಡುವ ಮತ್ತು ಮೋಟಾರು ಕಾರ್ಯಾಚರಣೆಗೆ ಅವಕಾಶವಿದೆ. ಸುಗಮ ಕಾರ್ಯಾಚರಣೆಗಾಗಿ 8-ಎಂಎಂ ಸ್ಟೀಲ್ ತಂತಿಯನ್ನು 3 ಹೆಚ್ ಪಿ ಮೋಟಾರ್‌ಗೆ ಸಂಪರ್ಕಿಸಲಾಗುತ್ತದೆ. ಯೋಜನೆ ಪೂರ್ಣಗೊಂಡ ನಂತರ ವಾರ್ಷಿಕ ನಿರ್ವಹಣೆಗಾಗಿ ಬಿಬಿಎಂಪಿಗೆ ಹಸ್ತಾಂತರಿಸಲಾಗುವುದು ಎಂದು ಗುತ್ತಿಗೆದಾರರು ತಿಳಿಸಿದ್ದಾರೆ.

ಕಂಬವು 19 ಟನ್ ತೂಕವಿದ್ದು, ಡಿಸೆಂಬರ್‌ನಲ್ಲಿ ಪೈಲ್ ಫೌಂಡೇಶನ್ ಮಾಡಲಾಗಿದೆ. ಕ್ರೇನ್ ಬಳಸಿ ಬೃಹತ್ ಕಂಬವನ್ನು ನಿರ್ಮಿಸಲಾಗಿದೆ. ಧ್ವಜಸ್ತಂಭದ ಸುತ್ತ ಕಾಂಕ್ರೀಟ್ ಮೆಟ್ಟಿಲುಗಳನ್ನು ನಿರ್ಮಿಸುವ ಕಾರ್ಯ ಪ್ರಗತಿಯಲ್ಲಿದ್ದು, ಜನವರಿ 25 ರ ಮೊದಲು ಸಿದ್ಧವಾಗಲಿದೆ.

ಇದಕ್ಕೂ ಮುನ್ನ ರಾಜಭವನದ ಬಳಿಯ ರಾಷ್ಟ್ರೀಯ ಸೇನಾ ವಸ್ತುಸಂಗ್ರಹಾಲಯದಲ್ಲಿ 213 ಅಡಿ ಎತ್ತರದ ಧ್ವಜಸ್ತಂಭವನ್ನು ಸ್ಥಾಪಿಸಲಾಗಿತ್ತು. ಆದಾಗ್ಯೂ, ಧ್ವಜದ ನಿರ್ವಹಣೆ ಮತ್ತು ಹೈಡ್ರಾಲಿಕ್ ಯಂತ್ರವನ್ನು ನಿರ್ವಹಿಸುವ ತಂಡದ ಕೊರತೆಯ ಬಗ್ಗೆ ರಾಜ್ಯ ಸರ್ಕಾರವು ತರಾಟೆಗೆ ತೆಗೆದುಕೊಂಡಿತು.

## 'ಸಿದ್ದರಾಮಯ್ಯನವರೇ ಸಂಸ್ಕೃತಿ, ಸಭ್ಯತೆ ಬಗ್ಗೆ ಮಾತನಾಡುವುದಾದರೆ ನನ್ನ ಎದುರು ಬಂದು ಮಾತಾಡಿ': ಅನಂತ್ ಕುಮಾರ್ ಹೆಗಡೆ



ಶಿರಸಿ(ಉತ್ತರ ಕನ್ನಡ): ಉತ್ತರ ಕನ್ನಡ ಸಂಸದ ಅನಂತ್ ಕುಮಾರ್ ಹೆಗಡೆ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯನವರ ನಡುವಿನ ವಾದ-ವಿವಾದ ಹೆಚ್ಚಾಗುತ್ತಿದೆ. ನನ್ನ ಮಾತನ್ನು ವಿರೋಧಿಸುವವರು ನನ್ನ ಮುಂದೆ ಬಂದು ಸಂಸ್ಕೃತಿ ಬಗ್ಗೆ ಚರ್ಚೆ ಮಾಡಲಿ. ಅವರಿಗೆ ಸಭ್ಯತೆ ಅಂದರೆ ಏನು ಎಂದು ನಾನು ಪಾಠ ಮಾಡುತ್ತೇನೆ. ಸಂಸ್ಕೃತಿ ಬಗ್ಗೆ ಸಿದ್ದರಾಮಯ್ಯ ನನ್ನ ಎದುರು ಬಂದು ಮಾತನಾಡಲಿ. ಏನೂ ಮಾತನಾಡಬೇಕು ಅಂತ ನಾನು ಹೇಳುತ್ತೇನೆ. ಯಾರಿಗೆ ಯಾವ ಭಾಷೆಯಲ್ಲಿ ಹೇಗೆ ಮಾತಾಡಬೇಕು ಹಾಗೆ ಮಾತಾಡಬೇಕು. ಸಭ್ಯತೆ ಅಂದರೆ ಏನು ಎಂಬುವುದನ್ನು ಮೊದಲು ಕಾಂಗ್ರೆಸ್ ನವರು ತಿಳಿದುಕೊಳ್ಳಲಿ ಎಂದು ಸಂಸದ ಅನಂತ ಕುಮಾರ್ ಹೆಗಡೆ ಮತ್ತೊಮ್ಮೆ ವಾಗ್ದಾಳಿ ನಡೆಸಿದ್ದಾರೆ.

ಉತ್ತರ ಕನ್ನಡ ಜಿಲ್ಲೆಯ ಶಿರಸಿಯ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಕಳೆದ ಚುನಾವಣೆಯಲ್ಲಿ ಪ್ರಧಾನಿ ಮೋದಿಯವರಿಗೆ ಏಕವಚನದಲ್ಲಿ ಮಾಸ್ ಮರ್ಡರ್ ಎಂದು ಕರೆದರು. ಅವರಿಗೊಂದು ನ್ಯಾಯ ನಮಗೊಂದು ನ್ಯಾಯನಾ..? ಯಾರಿಗೆ ಹೇಗೆ ಮಾತಾಡಬೇಕು ನಮಗೆ ಗೊತ್ತು. ಬೇಕಿದ್ದರೆ ಜನರ ಮುಂದೆ ಚರ್ಚೆ ಮಾಡೋಣ. ಎಲ್ಲೊ ಕೂತುಕೊಂಡು ಸಭೆಯಲ್ಲಿ ಮಾತನಾಡುವುದು ಸರಿ ಅಲ್ಲ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ತಾವು ಏಕವಚನ ಪ್ರಯೋಗ ಮಾಡಿರುವ ವಿಚಾರವಾಗಿ ಉಂಟಾಗಿರುವ ವಿವಾದ ಬಗ್ಗೆ ಪ್ರತಿಕ್ರಿಯಿಸಿದ ಅವರು, ನನ್ನ ಹೇಳಿಕೆಯನ್ನ ಖಂಡಿಸುವುದು ಸಹಜ. ಇದು ನನ್ನ ಹೇಳಿಕೆ ಇದು ಪಕ್ಷದ ಹೇಳಿಕೆ ಅಲ್ಲ. ಇದು ನನ್ನ ವೈಯಕ್ತಿಕ ಹೇಳಿಕೆ. ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹೇಳಿರುವ ಮಾತು ಸರಿ ಇದೆ ಎಂದು ಸ್ಪಷ್ಟಪಡಿಸಿದರು. ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ, ಪ್ರಧಾನಿ ಮೋದಿಯವರ ಮತ್ತು ನಮ್ಮ ದೇವಸ್ಥಾನಗಳ ಬಗ್ಗೆ ಸಿಎಂ ಸಿದ್ದರಾಮಯ್ಯ ಅಸಭ್ಯವಾಗಿ ಮೊದಲು ಮಾತನಾಡಿದ್ದಾರೆ. ನಮ್ಮ ದೇವಸ್ಥಾನದ ಬಗ್ಗೆ ಅಷ್ಟು ಕೀಳಾಗಿ ಮಾತನಾಡುವುದು ಯಾಕೆ ಬೇಕಿತ್ತು, ನಮ್ಮ ಪ್ರಧಾನಿ ಮೋದಿ, ಅಮಿತ ಶಾ ಬಗ್ಗೆ ಯಾರೆಲ್ಲ ಏನು ಏನು ಮಾತನಾಡಿದ್ದಾರೆ ಹೇಳಬೇಕಾ ಎಂದು ಕೇಳಿದರು.

ಜಾತ್ಯತೀತತೆಯಲ್ಲಿ ನಮಗೂ ನಂಬಿಕೆಯಿದೆ, ಆದರೆ ಕಾಂಗ್ರೆಸ್ ನ ಕೆಲವು ನಾಯಕರು ಮೊದಲು ಸಮಾಜಕ್ಕೆ, ಜನರಿಗೆ ಗೌರವ ಕೊಟ್ಟು ಮಾತನಾಡುವುದನ್ನು ಕಲಿಯಲಿ, ಆದರೆ ನಿಮ್ಮ ಧ್ವನಿ, ಭಾಷೆಯಲ್ಲಿ ಇರಲಿ, ಹಿಂದೂಗಳಿಗೆ, ಮುಸ್ಲಿಮರಿಗೆ ಒಂದು ಪದ್ಧತಿ ಯಾವ ನ್ಯಾಯ ಹೇಳಿ, ಆಮೇಲೆ ನಮಗೆ ಪಾಠ ಮಾಡಲು ಬನ್ನಿ, ಯಾರು ನನ್ನ ಮಾತನ್ನು ಒಪ್ಪಿಕೊಳ್ಳುತ್ತಾರೋ, ಬಿಡುತ್ತಾರೋ ಗೊತ್ತಿಲ್ಲ, ನನ್ನ ಮಾತನ್ನು ದೇವರು ಒಪ್ಪಿಕೊಳ್ಳುತ್ತಾರೆ, ಹಿಂದೂ ಸಮಾಜದ ಸಭ್ಯ ಜನ ಒಪ್ಪಿಕೊಳ್ಳುತ್ತಾರೆ ಎಂದರು.

# ರಾಜ್ಯ ಸರ್ಕಾರ ಕಾಂತರಾಜ್ ವರದಿ ಸ್ವೀಕರಿಸಿ ಬಿಡುಗಡೆಗೊಳಿಸಲಿ: ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ

ಬೆಂಗಳೂರು: ರಾಜ್ಯ ಸರ್ಕಾರ ಕಾಂತರಾಜ್ ವರದಿ ಸ್ವೀಕರಿಸಿ ಬಿಡುಗಡೆ ಮಾಡಬೇಕು ಎಂದು ಸಿಎಂ ಸಿದ್ದರಾಮಯ್ಯಗೆ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಒತ್ತಾಯಿಸಿದ್ದಾರೆ.

ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಕಾಯಕಯೋಗಿ ಶ್ರೀ ಸಿದ್ದರಾಮೇಶ್ವರ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇದರಿಂದ ಭೋವಿ ಸಮಾಜದ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಆದಷ್ಟು ಶೀಘ್ರವಾಗಿ ವರದಿ ಸ್ವೀಕಾರ ಮಾಡಿ, ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ಭೋವಿ ಸಮುದಾಯದವರಿಗೆ ಈ ಬಾರಿಯ ಲೋಕಸಭಾ ಟಿಕೆಟ್ ನೀಡಲೇಬೇಕು. ಸಮುದಾಯದ ಒಬ್ಬರನ್ನ ಕೆಪಿಎಸ್ಸಿ ಮೆಂಬರ್ ಮಾಡಬೇಕು. ಈಗಾಗಲೇ ಒಬ್ಬರ ಹೆಸರನ್ನ ಸರ್ಕಾರ ರಾಜ್ಯಪಾಲರಿಗೆ ಕಳುಹಿಸಿದೆ ಎಂಬ ಮಾಹಿತಿ ಇದೆ.

ನಮ್ಮ ಸಮುದಾಯಕ್ಕೆ ಸಿದ್ದರಾಮಯ್ಯ ಅವರೇ ಈಗ ಸಿದ್ದರಾಮೇಶ್ವರ ಆಗಿದ್ದಾರೆ ಎಂದು ಹೇಳಿದ್ದಾರೆ.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಕಲ್ಲು ಒಡೆಯುವವರು, ಗುಡಿ ಕಟ್ಟುವವರು, ವಿಗ್ರಹ ಹೊರುವವರು ನೀವು. ಆದರೆ ದೇವಸ್ಥಾನ ಪ್ರವೇಶಕ್ಕೆ ಭೋವಿ ಸಮುದಾಯದವರಿಗೆ ಅವಕಾಶವಿಲ್ಲ.

ನಾರಾಯಣಗುರುಗಳು ಹೇಳಿದ ಮಾರ್ಗವನ್ನು



ನೀವೆಲ್ಲರೂ ಅನುಸರಿಸಬೇಕು. ನಿಮ್ಮನ್ನು ಒಳಗೆ ಸೇರಿಸದ ದೇವಸ್ಥಾನಗಳನ್ನು ನೀವೇ ತಿರಸ್ಕರಿಸಿ ಎಂದಿದ್ದಾರೆ.

ನಿಮ್ಮದೇ ಆದ ದೇವಸ್ಥಾನಗಳನ್ನ ನಿರ್ಮಿಸಿ ಕೊಳ್ಳುವಂತೆ ಸಲಹೆ ನೀಡಿದ್ದಾರೆ. ಯಾವುದೇ ಕೆಲಸವೂ ಮೇಲಲ್ಲ, ಯಾವುದೇ ಕೆಲಸವೂ ಕೀಳಲ್ಲ, ಇದೇ ಕಾರಣಕ್ಕೆ ಕಾಯಕವೇ ಕೈಲಾಸ ಅಂತಾ ಶರಣರು ಹೇಳಿದ್ದಾರೆ.

ಎಲ್ಲರೂ ಉತ್ಪಾದನೆಯಲ್ಲಿ ಭಾಗವಹಿಸಬೇಕು, ಎಲ್ಲರಿಗೂ ವಿತರಿಸಬೇಕು. ನಮ್ಮ ಸರ್ಕಾರದ ಕಾರ್ಯಕ್ರಮಗಳೂ ಇದೇ ಆಶಯಕ್ಕೆ ಪೂರಕವಾಗಿವೆ. ಸಾಮಾಜಿಕ, ಆರ್ಥಿಕ ಚಟುವಟಿಕೆಗಳು ಎಲ್ಲಾ ಸಮುದಾಯಕ್ಕೆ ಸಿಗಬೇಕು.

ಭೋವಿ ಸಮುದಾಯದ ಬೇಡಿಕೆಯಂತೆ ಅಧ್ಯಯನ ಪೀಠ ಸ್ಥಾಪಿಸುತ್ತೇವೆ. ನನ್ನ ಮುಂದಿಟ್ಟಿರುವ ಎಲ್ಲಾ ಬೇಡಿಕೆಗಳನ್ನು ಈಡೇರಿಸುತ್ತೇನೆ ಎಂದು ಹೇಳಿದ್ದಾರೆ.

ಭೋವಿ ಸಮುದಾಯಕ್ಕೆ ಒಂದು ಲೋಕಸಭಾ ಟಿಕೆಟ್ ನೀಡುವಂತೆ ಸಿಎಂ ಸಿದ್ದರಾಮಯ್ಯಗೆ ವೇದಿಕೆ ಮೇಲೆ ಸಚಿವ ಶಿವರಾಜ್ ತಂಗಡಗಿ ಡಿಮ್ಯಾಂಡ್ ಮಾಡಿದ್ದಾರೆ.

ಇಂದಿರಾ ಗಾಂಧಿ ಅವರ ಕಾಲದಲ್ಲಿ ಭೋವಿ ಸಮುದಾಯದವರಿಗೆ ಲೋಕಸಭಾ ಸದಸ್ಯರು ಆಗುತ್ತಿದ್ದರು. ಕೇಂದ್ರದಲ್ಲಿ ಮಂತ್ರಿಯನ್ನು ಮಾಡುತ್ತಿದ್ದರು.

ಆದರೆ ಈಗ ನಮ್ಮ ಸಮುದಾಯದವರಿಗೆ ಟಿಕೆಟ್ ಕೊಡುತ್ತಿಲ್ಲ. ಈ ಬಾರಿಯ ಚುನಾವಣೆಗೆ ನಮ್ಮ ಸಮುದಾಯಕ್ಕೆ ಒಂದು ಲೋಕಸಭಾ ಟಿಕೆಟ್ ಕೊಡಿ ಎಂದಿದ್ದಾರೆ.

ಎಲ್ಲಿಯಾದರು ಟಿಕೆಟ್ ಕೊಡಿ, ನಮ್ಮ ಸಮುದಾಯದವರೆಲ್ಲಾ ಅಲ್ಲಿಗೆ ಹೋಗಿ ಕೆಲಸ ಮಾಡುತ್ತೇವೆ ಗೆದ್ದೇ ಗೆಲ್ಲಿಸುತ್ತೇವೆ.

ಇದರ ಜೊತೆಗೆ ನಮ್ಮ ಸಮುದಾಯದ ಒಬ್ಬರನ್ನ ಎಂಎಲ್ಸಿ ಮೆಂಬರ್ ಮಾಡಬೇಕು. ಸಿಎಂ ಸಿದ್ದರಾಮಯ್ಯ ಮೂರನೇ ಬಾರಿಗೂ ಮುಖ್ಯಮಂತ್ರಿ ಆಗಬೇಕು ಅನ್ನೋದು ನಮ್ಮ ಸಮುದಾಯದ ಆಸೆ ಎಂದು ಹೇಳಿದ್ದಾರೆ.

# ಕಾರ್ಮಿಕರ ಮಕ್ಕಳಿಗೆ ಕೂಸಿನ ಮನೆ ಸಹಕಾರಿ

ಬೆಳಗಾವಿ : ನೇರಗಾ ಯೋಜನೆಯಡಿ ಕೆಲಸ ಮಾಡುತ್ತಿರುವ ಕೂಲಿ ಕಾರ್ಮಿಕರ ಮಕ್ಕಳಿಗೆ ಕೂಸಿನ ಮನೆ ಸಹಕಾರಿಯಾಗಲಿದೆ ಎಂದು ಸಹಾಯಕ ನಿರ್ದೇಶಕರಾದ (ಗ್ರಾ.ಉ) ಸವಿತಾ ಎಂ. ಅವರು ಹೇಳಿದರು.

ತಾಲ್ಲೂಕಿನ ಕಂಗ್ರಾಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಅಲತಗಾ ಗ್ರಾಮದಲ್ಲಿ ಜಿಲ್ಲಾ ಪಂಚಾಯತ, ಎಸ್.ಐ.ಆರ್ಡಿ ಹಾಗೂ ಗ್ರಾಮ ಪಂಚಾಯಿತಿ ವತಿಯಿಂದ ಮಂಗಳವಾರ ಜನವರಿ 16 ರಂದು ಆಯೋಜಿಸಿದ್ದ ಕೂಸಿನಮನೆಯ ಉದ್ಘಾಟನಾ ಕಾರ್ಯಕ್ರಮವನ್ನು ನೆರವೇರಿಸಿ ಅವರು ಮಾತನಾಡಿದರು


ಗ್ರಾಮೀಣ ಭಾಗದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ತಮ್ಮ ಜಮೀನುಗಳಲ್ಲಿ ಕೃಷಿ ಕೆಲಸಕ್ಕೆ




ತೆರಳುತ್ತಾರೆ. ಕೂಲಿಕಾರ್ಮಿಕರು ಹಾಗೂ ಕೃಷಿ ಕಾರ್ಮಿಕರು ಬಹುತೇಕರು ಬಡ ಕುಟುಂಬದವರಾಗಿದ್ದು, ಪ್ರತಿ–ನಿತ್ಯ ಕೂಲಿ ಕೆಲಸಕ್ಕೆ ತೆರಳುವ ಅನಿವಾರ್ಯತೆ ಇರುತ್ತದೆ. ಇಂತಹ ಕುಟುಂಬದ ಮಹಿಳೆಯರು ತಮ್ಮ ಚಿಕ್ಕ ಮಕ್ಕಳನ್ನು ತಮ್ಮೊಂದಿಗೆ ಕರೆದುಕೊಂಡು ಹೋಗುವುದು ಅಸಾಧ್ಯ. ಮಹಿಳೆಯರು ತಮ್ಮ ಮಕ್ಕಳನ್ನು ಮನೆಯಲ್ಲಿಯೇ ಬಿಟ್ಟು ಕೆಲಸಕ್ಕೆ ತೆರಳಿದ ಸಂದರ್ಭದಲ್ಲಿ ಅವರು ಕೆಲಸದಿಂದ ಮನೆಗೆ ಮರಳುವವರೆಗೆ ಮಗುವಿಗೆ ತಾಯಿ ಹಾಲು ದೊರೆಯುವುದಿಲ್ಲ ಜೊತೆಗೆ ಪೌಷ್ಠಿಕ ಆಹಾರ ದೊರೆಯುವುದಿಲ್ಲ ಇದರಿಂದ ಮಕ್ಕಳು ಅಪೌಷ್ಠಿಕತೆಗೆ ಒಳಗಾಗಬಹುದಾಗಿದೆ. ಇದರಿಂದ ಗ್ರಾಮೀಣರ ಮಾನಸಿಕ ಆರೋಗ್ಯವು ಹಾಳಾಗುತ್ತದೆ. ಈ ಸಮಸ್ಯೆಗಳ ನಿವಾರಣೆಗೆ ಸರ್ಕಾರ ಈ ಯೋಜನೆ ಆರಂಭಿಸಿದೆ ಎಂದರು.

ಗ್ರಾಪಂ ಅಧ್ಯಕ್ಷರಾದ ಶ್ರೀಮತಿ ದೊಡ್ಡವ್ವ ಸಿದ್ದಪ್ಪ ಮಾಳಗಿ, ಉಪಾಧ್ಯಕ್ಷರಾದ ಕಲ್ಲಪ್ಪ ನಾಗೋಜಿ ಪಾಟೀಲ, ಪಿಡಿಒ ಗೋಪಾಲ ನಾಯಕ, ತಾಂತ್ರಿಕ ಸಂಯೋಜಕ ನಾಗರಾಜ ಯರಗುದ್ದಿ, ತಾಐಇಸಿ ಸಂಯೋಕರುಗಳಾದ ರಮೇಶ ಮಾದರ, ಮಾಂತೇಶ ಬಾಡವನಮಠ, ಗಣಕಯಂತ್ರ ನಿರ್ವಾಹಕ ಪ್ರಶಾಂತ ಹೊಸಮನಿ ಸರ್ವ ಸದಸ್ಯರು ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಇದ್ದರು.

# ಓವರ್ ಟೇಕ್ ಭರದಲ್ಲಿ ಅಪಘಾತ; ನಾಲ್ವರ ಸಾವು



ಚಾಮರಾಜನಗರ: ಸಂಕ್ರಾಂತಿ ಹಬ್ಬದ ರಜೆಯ ಗುಂಗಿನಲ್ಲಿ ಕುಟುಂಬದ ಜೊತೆ ಬಂಡೀಪುರದ ಸಫಾರಿಗೆ ತೆರಳಲು ಹೋಗುತ್ತಿದ್ದ ಒಂದೇ ಕುಟುಂಬದ ನಾಲ್ವರು ರಸ್ತೆ ಅಪಘಾತದಲ್ಲಿ ಸಾವಿಗೀಡಾದ ಘಟನೆ ಕೊಳ್ಳೆಗಾಲದ ಸಮೀಪದ ಪಾಳ್ಯ ಗ್ರಾಮದ ಬಳಿ ನಡೆದಿದೆ.

ಮೃತರನ್ನು ಸಂತೋಷ್, ಸೌಮ್ಯ ಹಾಗೂ ದಂಪತಿಯ ಮಕ್ಕಳಾದ ನಿತ್ಯ ಸಾಕ್ಷಿ ಹಾಗೂ ಅಭಿಷೇಕ್ ಎಂದು ಗುರುತಿಸಲಾಗಿದೆ. ಮೂವರು ಸ್ಥಳದಲ್ಲೇ ಸಾವಿಗೀಡಾಗಿದ್ದು, ಗಂಭೀರವಾಗಿ ಗಾಯಗೊಂಡಿದ್ದ ಅಭಿಷೇಕ್ ಚಿಕಿತ್ಸೆ ಫಲಿಸದೆ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾನೆ.

ಇವರೆಲ್ಲ ಸಂಕ್ರಾಂತಿ ರಜೆಯ ಪ್ರಯುಕ್ತ ಬೈಕ್ನಲ್ಲಿ ಬಂಡೀಪುರ ಸಫಾರಿ ತೆರಳಲು ಸಜ್ಜಾಗಿದ್ದರು. ಬೆಳಗ್ಗೆ 11 ಗಂಟೆಗೆ ರೆಡಿಯಾದ ನಾಲ್ವರು ಬೈಕ್ ಏರಿ ಕೊಳ್ಳೆಗಾಲದ ಚರ್ಚ್ಗೆ ತೆರಳಿ ಪ್ರಾರ್ಥನೆ ಮಾಡಿ ಬಳಿಕ ಹೊರಟಿದ್ದರು. ಈ ವೇಳೆ ಓವರ್ ಟೇಕ್ ಮಾಡುವ ವೇಳೆ ಎದುರಿಗೆ ಬಂದ ಭತ್ತ ಕಟಾವು ಮಾಡುವ ಯಂತ್ರಕ್ಕೆ ಬೈಕ್ ಡಿಕ್ಕಿಯಾಗಿದೆ. ಪರಿಣಾಮ ಈ ದುರ್ಘಟನೆ ಸಂಭವಿಸಿದೆ.

ಅಪಘಾತದ ಭೀಕರತೆ ಎಷ್ಟಿತ್ತೆಂದರೆ ಮೃತದೇಹಗಳು ಯಂತ್ರದ ಚೂಪಾದ ಭಾಗಗಳಲ್ಲಿ ಸಿಲುಕಿದ್ದು ಮನಕಲಕುವಂತಿತ್ತು. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಕೊಳ್ಳೆಗಾಲದ ಸರ್ಕಾರಿ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ಮೃತದೇಹಗಳನ್ನು ಕುಟುಂಬಸ್ಥರಿಗೆ ಒಪ್ಪಿಸಲಾಗಿದೆ.




# ಎರಡು ಬಸ್ಗಳು ಡಿಕ್ಕಿ; ಓರ್ವ ಸ್ಥಳದಲ್ಲೇ ಸಾವು, 30 ಯಾತ್ರಿಗಳಿಗೆ ಗಾಯ

ಮಧ್ಯಪ್ರದೇಶ : ಎರಡು ಬಸ್ಗಳು ಡಿಕ್ಕಿಯಾಗಿ ಓರ್ವ ಸಾವನ್ನಪ್ಪಿರುವ ಘಟನೆ ಆಂಧ್ರಪ್ರದೇಶದ ಶ್ರೀಕಾಕುಳಂ ಜಿಲ್ಲೆಯ ಪಲಾಸಾ ಬಳಿ ನಡೆದಿದೆ.

ಮಧ್ಯಪ್ರದೇಶದಿಂದ ಸುಮಾರು 100 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಎರಡು ಬಸ್‌ಗಳು ಡಿಕ್ಕಿಯಾಗಿವೆ. ಪರಿಣಾಮ ಓರ್ವ ವ್ಯಕ್ತಿ ಸಾವನ್ನಪ್ಪಿದ್ದು, 30 ಮಂದಿ ಗಾಯಗೊಂಡಿದ್ದಾರೆ. ಗಾಯಾಳುಗಳನ್ನ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಘಟನೆಯಲ್ಲಿ ಎರಡೂ ಬಸ್ಗಳು ಜಖಂಗೊಂಡಿವೆ. ತೀರ್ಥಯಾತ್ರೆ ಸಂಬಂಧ ಮಧ್ಯ ಪ್ರದೇಶದಿಂದ ಆಂಧ್ರಕ್ಕೆ ಬಸ್ಗಳು ಬಂದಿದ್ದವು ಎನ್ನಲಾಗಿದೆ.

# 404 ರನ್ ಗಳಿಸಿ ದೇಶದ ಗಮನ ಸೆಳೆದ ಕರ್ನಾಟಕದ ಪ್ರಖರ್

ಶಿವಮೊಗ್ಗ: ಕೂಚ್ ಬಿಹಾರ್ ಟ್ರೋಫಿಯಲ್ಲಿ ಕರ್ನಾಟಕದ ಬ್ಯಾಟರ್ ಪ್ರಖರ್ ಚತುರ್ವೇದಿ ಫೈನಲ್‌ನಲ್ಲಿ ಮುಂಬೈ ವಿರುದ್ಧ ಅಜೇಯ 404 ರನ್ ಗಳಿಸಿ ಇದೀಗ ದೇಶದ ಗಮನ ಸೆಳೆದಿದ್ದಾರೆ.

ಚತುರ್ವೇದಿ ಅವರ ಇನ್ನಿಂಗ್ಸ್ ಕೂಚ್ ಬಿಹಾರ್ ಟ್ರೋಫಿ ಫೈನಲ್‌ನಲ್ಲಿ ಯುವರಾಜ್ ಸಿಂಗ್ ಅವರ ಗರಿಷ್ಠ ಸ್ಕೋರ್ ದಾಖಲೆಯನ್ನು ಮುರಿದಿದೆ. ಯುವರಾಜ್ 1999 ರಲ್ಲಿ ಬಿಹಾರ ವಿರುದ್ಧ ಫೈನಲ್‌ನಲ್ಲಿ 358 ರನ್ ಗಳಿಸಿದ್ದರು. ಇದೀಗ ಪ್ರಖರ್ ಅವರು ಯುವರಾಜ್ ಸಿಂಗ್ ಅವರ 25 ವರ್ಷದ ಹಳೆಯ ದಾಖಲೆಯನ್ನು ಮುರಿದಿದ್ದಾರೆ.

ಕರ್ನಾಟಕದ ಪ್ರಖರ್ ಚತುರ್ವೇದಿ ಕೂಚ್ ಬಿಹಾರ್ ಟ್ರೋಫಿಯ ಫೈನಲ್‌ನಲ್ಲಿ 400 ರನ್ ಗಳಿಸಿದ ಮೊದಲ ಆಟಗಾರನಾಗುವ ಮೂಲಕ ಇತಿಹಾಸದ ಪುಸ್ತಕಗಳಲ್ಲಿ ತಮ್ಮ ಹೆಸರನ್ನು ಬರೆದಿದ್ದಾರೆ.

ಸೋಮವಾರ ಶಿವಮೊಗ್ಗದಲ್ಲಿ ಮುಂಬೈ ವಿರುದ್ಧದ ಪಂದ್ಯದಲ್ಲಿ ಕರ್ನಾಟಕದ ಬ್ಯಾಟರ್ ಪ್ರಖರ್ ಚತುರ್ವೇದಿ ಕೂಚ್ ಬಿಹಾರ್ ಟ್ರೋಫಿಯ ಫೈನಲ್‌ನಲ್ಲಿ 400 ರನ್ ಗಳಿಸಿದ ಮೊದಲ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಮುಂಬೈನ ಮೊದಲ ಇನ್ನಿಂಗ್ಸ್ ಸ್ಕೋರ್ 280 ರನ್ನು ಬೆನ್ನಟ್ಟಿದ ಕರ್ನಾಟಕಕ್ಕೆ ಇನ್ನಿಂಗ್ಸ್ ತೆರೆದು, ಚತುರ್ವೇದಿ ಪಂದ್ಯವನ್ನು ಡ್ರಾ ಎಂದು ಘೋಷಿಸಿದಾಗ 638 ಎಸೆತಗಳಲ್ಲಿ 404 ರನ್ ಗಳಿಸಿ ಅಜೇಯರಾಗಿ ಉಳಿದರು, ಕರ್ನಾಟಕ ಮೊದಲ ಇನ್ನಿಂಗ್ಸ್ ಮುನ್ನಡೆ ಸಾಧಿಸಿತು.

2011 ರಲ್ಲಿ ಅಸ್ಸಾಂ ವಿರುದ್ಧ ಮಹಾರಾಷ್ಟ್ರದ ಪರವಾಗಿ ವಿಜಯ್ ಝೋಲ್ 451 ರನ್ ಗಳಿಸಿದ ನಂತರ ಕೂಚ್ ಬಿಹಾರ್ ಟ್ರೋಫಿಯಲ್ಲಿ ಒಟ್ಟಾರೆ ಅತ್ಯಧಿಕ ಸ್ಕೋರ್‌ಗಳ ಪಟ್ಟಿಯಲ್ಲಿ ಎರಡನೇ ಸ್ಥಾನ ಪಡೆದರು.



ಚತುರ್ವೇದಿ ಕರ್ನಾಟಕದ ಇನ್ನಿಂಗ್ಸ್‌ನಾದ್ಯಂತ ನಾಲ್ಕು ಶತಕಗಳ ಜೊತೆಯಾಟವನ್ನು ಹೊಂದಿದ್ದರು, ಅವರ 290 ರನ್‌ಗಳ ಜೊತೆಯಲ್ಲಿ ಹರ್ಷಿಲ್ ಧರ್ಮಾನಿ (228 ಎಸೆತಗಳಲ್ಲಿ 169) ಅತ್ಯಧಿಕ.

ಕಾರ್ತಿಕ್ ಎಸ್ ಯು, ಕಾರ್ತಿಕೇಯ ಕೆ ಪಿ, ಹಾರ್ದಿಕ್ ರಾಜ್ ಮತ್ತು ಸಮರ್ಥ ಎನ್ ಅರ್ಧಶತಕಗಳ ಕೊಡುಗೆ ನೀಡಿದರು. ಪಂದ್ಯದ ಅಂತ್ಯಕ್ಕೆ ಕರ್ನಾಟಕ 223 ಓವರ್‌ಗಳಲ್ಲಿ 890/8 ಗಳಿಸಿತು.

ಚತುರ್ವೇದಿ ಅವರು ತಮ್ಮ 404 ರನ್ ನಲ್ಲಿ 46 ಬೌಂಡರಿ ಹಾಗೂ ಮೂರು ಸಿಕ್ಸರ್ ಬಾರಿಸಿದ್ದಾರೆ. ಮಾಜಿ ಆಲ್ ರೌಂಡರ್ ಕೆ.ಜಶ್ವಂತ್ ಅವರು ಪ್ರಖರ್ ಚತುರ್ವೇದಿ ಅವರ ಕೋಚ್. ಪ್ರಖರ್ ಶ್ರೇಷ್ಠ ಆಟಗಾರರಾಗಿದ್ದಾರೆ. 2017ರಲ್ಲಿ ಅವರು ಸಿಕ್ಸ್ ಅಕಾಡೆಮಿಯಲ್ಲಿ ತರಬೇತಿ ಪಡೆಯುತ್ತಿದ್ದರು. ಆಗ ಅವರಿಗೆ ಕೇವಲ 11 ವರ್ಷ. ಆದರೆ ಅವರಿಗೆ 16 ವರ್ಷದ ಒಳಗಿನವರ ಅಂಡರ್– 16 ಪಂದ್ಯಾವಳಿಯಲ್ಲಿ ಅವಕಾಶ ಲಭಿಸದೆ ಹೋಯಿತು ಎಂದು ಜಶ್ವಂತ್ ಹೇಳಿದರು.

ಕರ್ನಾಟಕ ಚಾಂಪಿಯನ್ : ಕೂಚ್ ಬಿಹಾರ್ ರಾಷ್ಟ್ರೀಯ ಅಂಡರ್–19 ಪಂದ್ಯಾವಳಿಯಲ್ಲಿ ಕರ್ನಾಟಕ ಚೊಚ್ಚಲ ಬಾರಿಗೆ ಚಾಂಪಿಯನ್ ಆಗಿ ಹೊರಹೊಮ್ಮಿದೆ. ಸೋಮವಾರ ಮುಕ್ತಾಯಗೊಂಡ ಮುಂಬೈ ವಿರುದ್ಧದ ಫೈನಲ್ ಪಂದ್ಯ ಡ್ರಾಗೊಂಡರೂ, ಮೊದಲ ಇನ್ನಿಂಗ್ಸ್ ಮುನ್ನಡೆ ಆಧಾರದಲ್ಲಿ ರಾಜ್ಯ ಚಾಂಪಿಯನ್ ಆಯಿತು.

ಮೊದಲ ಇನ್ನಿಂಗ್ಸ್‌ನಲ್ಲಿ ಆಯುಷ್ ಮಾತ್ರೆ ಶತಕದ ನೆರವಿನಿಂದ ಮುಂಬೈ 113.5 ಓವರ್‌ಗಳಲ್ಲಿ 380 ರನ್‌ಗೆ ಆಲೌಟ್ ಆಗಿತ್ತು. ಇದಕ್ಕುತ್ತರವಾಗಿ ಕರ್ನಾಟಕ 2 ದಿನಗಳಿಗೆ ಹೆಚ್ಚು ಕಾಲ ಒಟ್ಟು 223 ಓವರ್ ಬ್ಯಾಟ್ ಮಾಡಿ, 8 ವಿಕೆಟ್‌ಗೆ ಬರೋಬ್ಬರಿ 890 ರನ್ ಕಲೆಹಾಕಿ ಮುಂಬೈ ಪಡೆಯ ಬೆವರಿಳಿಸಿತು. ಆರಂಭಿಕ ಬ್ಯಾಟರ್ ಪ್ರಖರ್ ಚತುರ್ವೇದಿ ಔಟಾಗದೆ 404 ರನ್ ಬಾರಿಸಿ ದಾಖಲೆ ಬರೆದರು. ರಾಜ್ಯ ತಂಡ ಇನ್ನಿಂಗ್ಸ್ ಡಿಕ್ಲೇರ್ ಮಾಡಿಕೊಳ್ಳುತ್ತಿದ್ದಂತೆ ಪಂದ್ಯವನ್ನು ಡ್ರಾ ಎಂದು ಘೋಷಿಸಲಾಯಿತು.

# ಗುರು ಸಿದ್ದರಾಮೇಶ್ವರರ ಕೊಡುಗೆ ಅಪಾರ

ಕೆಂಭಾವಿ: ವಚನ ಕ್ರಾಂತಿಯ ಮೂಲಕ ಸಮಾಜಕ್ಕೆ ದಾರಿದೀಪವಾಗಿದ್ದ ಶ್ರೀ ಸಿದ್ದರಾಮೇಶ್ವರರ ಸಂದೇಶಗಳನ್ನು ಜೀವನದಲ್ಲಿ ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದು ಮುಖಂಡ ಆದಿತ್ಯ ಪೊಲೀಸ್ ಪಾಟೀಲ್ ಹೇಳಿದರು.

ಪಟ್ಟಣದ ಸಿದ್ದರಾಮೇಶ್ವರ ವೃತ್ತದಲ್ಲಿ ಸೋಮವಾರ ಶಿವಯೋಗಿ ಸಿದ್ಧರಾಮೇಶ್ವರರ 852 ನೇ ಜಯಂತಿ ಆಚರಣೆ ಸಮಾರಂಭದಲ್ಲಿ ಸಿದ್ದರಾಮೇಶ್ವರರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು ಸರ್ವರಿಗೂ ಸಮಾನತೆ, ಸಾಮಾಜಿಕ ಕ್ರಾಂತಿ, ಮಾನವ ಧರ್ಮದ ಶ್ರೇಷ್ಠತೆಯನ್ನು ಸಾರುವಲ್ಲಿ, ಶರಣ ಸಂಸ್ಕೃತಿಯ ಇತಿಹಾಸದಲ್ಲಿ



ಬಹುದೊಡ್ಡ ಮೈಲುಗಲ್ಲು ಸಾಧಿಸಿದ ಗುರು ಸಿದ್ದರಾಮೇಶ್ವರರ ಕೊಡುಗೆ ಅಪಾರ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಶಾಂತ ಹಿರೇಮಠ, ಪುರಸಭೆ ಸದಸ್ಯರಾದ ಚಳಿಗೆಪ್ಪ ವಡ್ಡರ, ದೇವಪ್ಪ ಹಂದ್ರಾಳ, ರಾಜು ಬಾಂಬೆ, ರಂಗಪ್ಪ ವಡ್ಡರ, ಶ್ರೀನಿವಾಸ ವಡ್ಡರ, ರಮೇಶ ಚಿಂಚೋಳಿ, ಭೀಮಣ್ಣ ಭೈರಮಡ್ಡಿ, ಕುಮಾರ ಭೋವಿ, ಬಸವರಾಜ ವ್ಯಾಗೇರಿ, ಗಂಗಾಧರ, ವಿಜಯಕುಮಾರ್, ರಾಜು, ಅಂಬರೀಷ್, ದುರ್ಗಪ್ಪ ಸೇರಿದಂತೆ ಇತರರಿದ್ದರು.

# ನ್ಯಾಯಕ್ಕಾಗಿ ಪೊಲೀಸ್ ಠಾಣೆ ಮೆಟ್ಟಿಲೇರಿದ್ದ ಮಹಿಳೆಗೆ ಲೈಂಗಿಕ ಕಿರುಕುಳ ನೀಡಿದ ಕಾನ್ಸ್‌ಟೇಬಲ್



ಕಲಬುರಗಿ: ಪತಿಯೊಂದಿಗೆ ಗಲಾಟೆ ಮಾಡಿಕೊಂಡು ಪೊಲೀಸ್ ಠಾಣೆ ಮೆಟ್ಟಿಲೇರಿದ್ದ ಮಹಿಳೆಯೊಬ್ಬಳಿಗೆ ಠಾಣೆಯ ಕಾನ್ಸ್‌ಟೇಬಲ್ ಒಬ್ಬ ಲೈಂಗಿಕ ಕಿರುಕುಳ ನೀಡಿದ ಆರೋಪ ಕೇಳಿ ಬಂದಿದೆ.

ಕಮಲಾಪುರ ಪೊಲೀಸ್ ಠಾಣೆಯ ಕಾನ್ಸ್‌ಟೇಬಲ್ ಬಸವರಾಜ್ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಮಹಿಳೆ ಆರೋಪಿಸಿದ್ದಾಳೆ. ಮಹಿಳೆ ಗಂಡನ ಜೊತೆ ಗಲಾಟೆ ಮಾಡಿಕೊಂಡು ಪೊಲೀಸ್ ಠಾಣೆ ಮೆಟ್ಟಿಲೇರಿದ್ದಳು.

ಈ ವೇಳೆ ಠಾಣೆಯ ಎಸ್ಬಿ ಡ್ಯೂಟಿಯಲ್ಲಿದ್ದ ಬಸವರಾಜ್, ಮಹಿಳೆಯ ಪತಿಯನ್ನು ಸರಿದಾರಿಗೆ ತರುವುದಾಗಿ ಹೇಳಿ ಸಲುಗೆ ಬೆಳೆಸಿದ್ದಾನೆ. ಬಳಿಕ ಮಹಿಳೆಯ ಮೊಬೈಲ್ ನಂಬರ್ ಪಡೆದು ಆಕೆಗೆ ಕರೆ ಮಾಡಿ ಬಲವಂತವಾಗಿ ತನ್ನ ಜೊತೆ ಒಂದು ರಾತ್ರಿ ಕಳೆಯುವಂತೆ ಪೀಡಿಸಿದ್ದಾನೆ ಎಂದು ಮಹಿಳೆ ಆರೋಪಿಸಿದ್ದಾರೆ.

ಇಷ್ಟೇ ಅಲ್ಲದೇ, ತನ್ನ ಕಾರಿನಲ್ಲಿ ಕರೆದೊಯ್ದು ಬಲವಂತವಾಗಿ ಮುತ್ತಿಟ್ಟು ಲೈಂಗಿಕ ದೌರ್ಜನ್ಯ ಎಸಗಿದ್ದಾನೆ. ನಿನ್ನನ್ನು ನಾನು ಮದುವೆಯಾಗುತ್ತೇನೆ, ಗಂಡನನ್ನ ಬಿಟ್ಟು ಬರುವಂತೆ ಒತ್ತಡ ಹೇರಿದ್ದಾನೆ.

ಮಹಿಳೆ ಒಪ್ಪದೆ ಇದ್ದಾಗ ಆಕೆಯ ಮೇಲೆ ಕೇಸ್ ಹಾಕಿ, ಆಕೆ ಮತ್ತು ಆಕೆಯ ತಂದೆ–ತಾಯಿಯನ್ನ ಜೈಲಿಗೆ ಕಳಿಸುವ ಬೆದರಿಕೆ ಹಾಕಲಾಗಿದೆ ಎಂದು ಮಹಿಳೆ ಆರೋಪಿಸಿದ್ದಾಳೆ.

ಕಾನ್ಸ್ಟೇಬಲ್ನಿಂದ ಕಿರುಕುಳ ಹೆಚ್ಚಾಗುತ್ತಿದ್ದಂತೆ ಬೇಸತ್ತ ಮಹಿಳೆ ಕಲಬುರಗಿಯ ಮಹಿಳಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾಳೆ. ಬಸವರಾಜ್ ವಿರುದ್ಧ ಐಪಿಸಿ ಸೆಕ್ಷನ್ 354(ಎ), 504, 506 ಅಡಿಯಲ್ಲಿ ದೌರ್ಜನ್ಯ ಹಾಗೂ ಹಲ್ಲೆ ಪ್ರಕರಣ ದಾಖಲಾಗಿದೆ.

# ಕನಿಷ್ಠ ವೇತನ ಹೆಚ್ಚಿಸಲು, ಕಾರ್ಮಿಕರ ಸಂಖ್ಯೆ ಕಡಿತ ಆದೇಶ ಹಿಂಪಡೆಯಲು ಒತ್ತಾಯಿಸಿ ಹಾಸ್ಟೆಲ್ ಕಾರ್ಮಿಕರ ಬೆಂಗಳೂರು ಚಲೋ: ಎಐಯುಟಿಯುಸಿ

ಬೆಳಗಾವಿ: ಹಾಸ್ಟೆಲ್ ಕಾರ್ಮಿಕರ ಕನಿಷ್ಠ ವೇತನವನ್ನು ಇಂದಿನ ಬೆಲೆಯೇರಿಕೆಗೆ ತಕ್ಕಂತೆ ಹೆಚ್ಚಿಸಲು ಮತ್ತು ಇನ್ನಿತರ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಇದೇ 19 ರಂದು ಬೆಂಗಳೂರಿನಲ್ಲಿ ನಡೆಯುತ್ತಿರುವ ರಾಜ್ಯ ಹೋರಾಟದ ನಡೆಯುತ್ತಿದೆ.

ಈ ಬಗ್ಗೆ ಪ್ರಕಟನೆ ನೀಡಿದ ಸಂಘದ ರಾಜ್ಯ ಉಪಾಧ್ಯಕ್ಷರಾದ ಗಂಗಾಧರ ಬಡಿಗೇರ, ರಾಜ್ಯ ಸರಕಾರದ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ವಿಶ್ವವಿದ್ಯಾನಿಲಯಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ರಾಜ್ಯದಾದ್ಯಂತ ವಿವಿಧ ವಸತಿನಿಲಯಗಳು, ವಸತಿಶಾಲೆ, ವಸತಿ ಕಾಲೇಜು ಮತ್ತು ಆಶ್ರಮ ಶಾಲೆಗಳಲ್ಲಿ ಹೊರಗುತ್ತಿಗೆ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ.

ಇವರಲ್ಲಿ ಬಹುಪಾಲು ಕಾರ್ಮಿಕರು ಮಹಿಳೆಯರೇ ಇದ್ದು, ಕಾರ್ಮಿಕ ಇಲಾಖೆ ಕಡ್ಡಾಯಗೊಳಿಸಿರುವ ಕನಿಷ್ಠ ವೇತನ, ಕಾನೂನು ಬದ್ಧ ವಾರದ ರಜೆ, ರಾಷ್ಟ್ರೀಯ ಹಬ್ಬಗಳ ರಜೆಗಳಿಂದ ವಂಚಿತರಾಗಿದ್ದಾರೆ. ಇಪಿಎಫ್, ಇಎಸ್‌ಐನ ಹಣ ಕೂಡಾ ಕಾರ್ಮಿಕರ ಖಾತೆಗಳಿಗೆ ಸರಿಯಾಗಿ ಜಮೆಯಾಗುತ್ತಿಲ್ಲ. ದಿನಕ್ಕೆ 8 ಗಂಟೆಗಳಿಗಿಂತ ಹೆಚ್ಚಿನ ಅವಧಿಯ ಕೆಲಸಕ್ಕೆ ಬಹುತೇಕ ಹಾಸ್ಟೆಲ್‌ಗಳಲ್ಲಿ ದುಡಿಸಿಕೊಳ್ಳುತ್ತಿದ್ದು, ಹೆಚ್ಚುವರಿ ವೇತನ (ಓಟಿ) ನೀಡುತ್ತಿಲ್ಲ, ವೇತನ ಪಾವತಿ ಚೀಟಿ ನೀಡುತ್ತಿಲ್ಲ.

ಈಗಲೂ ಧಾರವಾಡ ಜಿಲ್ಲೆಯಲ್ಲಿ ಹಲವಾರು ತಿಂಗಳುಗಳ ಬಾಕಿ ವೇತನ ಬಂದಿಲ್ಲ.ಇಂದಿನ ಬೆಲೆ ಏರಿಕೆಗೆ ಹೋಲಿಸಿದರೆ ಇವರುಗಳು ಅತ್ಯಂತ ಕಡಿಮೆ ವೇತನ ಪಡೆಯುತ್ತಿದ್ದಾರೆ.ಕಾಯ್ದೆ ಪ್ರಕಾರ 5 ವರ್ಷಕ್ಕೊಮ್ಮೆ ಕಾರ್ಮಿಕರ ವೇತನ ಪರಿಷ್ಕರಣೆ ಯಾಗಬೇಕು. 2021–22 ಕ್ಕೆ ಆಗಬೇಕಿದ್ದ ವೇತನ ಪರಿಷ್ಕರಣೆ ಅವೈಜ್ಞಾನಿಕವಾಗಿ ಪುಡಿಗಾಸು ಹೆಚ್ಚಳ ಮಾಡಿ ಸರಕಾರ ಆದೇಶ ಮಾಡಿತ್ತು. ಆದ್ದರಿಂದ ಬೆಲೆ ಏರಿಕೆ, ಹಣದುಬ್ಬರಗಳನ್ನು ಪರಿಗಣಿಸಿ ವೈಜ್ಞಾನಿಕವಾಗಿ ಕನಿಷ್ಠ ವೇತನವನ್ನು 35,950/– ಕ್ಕೆ ಹೆಚ್ಚಿಸಬೇಕು ಎಂಬುದು ಕಾರ್ಮಿಕರ ಒತ್ತಾಸೆಯಾಗಿದೆ. ಅಲ್ಲದೆ ಹೊರಗುತ್ತಿಗೆ ಪದ್ಧತಿ ಬಂದ ಮೇಲೆ ಕಾರ್ಮಿಕರ ಶೋಷಣೆ ತೀವ್ರವಾಗಿದೆ. ಒಬ್ಬ ಖಾಯಂ ನೌಕರನ ಜಾಗದಲ್ಲಿ 4 ಜನ ಹೊರಗುತ್ತಿಗೆ ಕಾರ್ಮಿಕರನ್ನು ದುಡಿಸಿಕೊಳ್ಳಲಾಗುತ್ತಿದೆ.

25 ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ಈ ಕಾರ್ಮಿಕರಿಗೆ ಸೇವಾ ಭದ್ರತೆ ಹಾಗೂ ಪಿಂಚಣಿ ಇಲ್ಲ.

ಆದ್ದರಿಂದ ಆಧುನಿಕ ಜೀತಪದ್ಧತಿಯಂತಿರುವ ಈ ಹೊರಗುತ್ತಿಗೆ ಪದ್ಧತಿಯನ್ನು ಸರ್ಕಾರ ಕೈ ಬಿಟ್ಟು ಎಲ್ಲಾ ಹೊರಗುತ್ತಿಗೆ ಹಾಸ್ಟೆಲ್ ಕಾರ್ಮಿಕರನ್ನು ಖಾಯಂ ಮಾಡಬೇಕು. ಅಲ್ಲಿಯವರೆಗೆ ಇಲಾಖೆಯಿಂದ ನೇರ ವೇತನ ಪಾವತಿಯ ಕ್ರಮ ಕೈಗೊಳ್ಳಬೇಕು ಎಂದು ಸರ್ಕಾರವನ್ನು ಆಗ್ರಹಿಸಬೇಕಾಗಿದೆ. ಆದ್ದರಿಂದ ದಿನಾಂಕ 19ರಂದು ನಡೆಯುವ ಬೆಂಗಳೂರು ಚಲೋ ಹೋರಾಟಕ್ಕೆ ಜಿಲ್ಲೆಯ ಎಲ್ಲ ಇಲಾಖೆಗಳ ಸಮಸ್ತ ಹಾಸ್ಟೆಲ್ ಕಾರ್ಮಿಕರು ಹೋರಾಟಕ್ಕೆ ಸಿದ್ದರಾಗಬೇಕು ಎಂದರು.

# ಸುಸಜ್ಜಿತ ಭೋವಿ ಸಮುದಾಯ ಭವನ ನಿರ್ಮಾಣಕ್ಕೆ ಅಸ್ತು: ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ

ಬಳ್ಳಾರಿ: ಜಿಲ್ಲೆಯಲ್ಲಿ ಸುಸಜ್ಜಿತವಾದ ಭೋವಿ ಸಮುದಾಯ ಭವನವನ್ನು ಅಂದಾಜು 2 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು ಎಂದು ಯುವಜನ ಸಬಲೀಕರಣ, ಕ್ರೀಡಾ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ನಾಗೇಂದ್ರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ಕುಮಾರ್ ರಸ್ತೆಯ ರಾಘವ ಕಲಾಮಂದಿರದಲ್ಲಿ ಏರ್ಪಡಿಸಿದ್ದ 852ನೇ ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಸಿದ್ಧರಾಮೇಶ್ವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಸುಮಾರು 2 ಕೋಟಿ ರೂ. ವೆಚ್ಚದಲ್ಲಿ ಭೋವಿ ಸಮುದಾಯ ಭವನ ನಿರ್ಮಾಣ ಮಾಡಿಕೊಡಲಾಗುವುದು. ಬಳ್ಳಾರಿ ನಗರ ಅಥವಾ ಗ್ರಾಮೀಣ ಭಾಗದಲ್ಲಿ ಸ್ಥಳ ಗುರುತಿಸಿದರೆ ಶ್ರೀಘದಲ್ಲಿ ಭೂಮಿ ಪೂಜೆ ನೆರವೇರಿಸಲಾಗುವುದು ಮತ್ತು ನನ್ನ ವೈಯಕ್ತಿಕವಾಗಿ 10 ಲಕ್ಷ ರೂ. ನೀಡುತ್ತೇನೆ



ಎಂದರು.

ಸಮುದಾಯದವರಿಗೆ ಕಲ್ಲು, ಬಂಡೆ ಒಡೆಯಲು ಸರ್ಕಾರ ಮತ್ತು ಜಿಲ್ಲಾಡಳಿತದೊಂದಿಗೆ ಚರ್ಚಿಸಿ ಸಂಗನಕಲ್ಲು, ಬಂಡಿಹಟ್ಟಿ ಇತರೆ ಪ್ರದೇಶಗಳನ್ನು ಗುರುತಿಸಿ ಸರ್ಕಾರ ನಿಯಮಗಳ ಪ್ರಕಾರ ಅಧಿಕೃತವಾಗಿ ಹಾಗೂ ಮಿತಿಯಾಗಿ ಕಲ್ಲುಬಂಡೆ ಒಡೆಯಲು ಅವಕಾಶ ಕಲ್ಪಿಸಲಾಗುವುದು. ಭೋವಿ ಸಮುದಾಯದವರು ಶೈಕ್ಷಣಿಕವಾಗಿ, ರಾಜಕೀಯವಾಗಿ ಮತ್ತು ಆರ್ಥಿಕವಾಗಿ ಸದೃಢರಾಗಬೇಕು ಎಂದು ಸಲಹೆ ಮಾಡಿದರು.

ಕಲ್ಲು, ಮಣ್ಣು, ಸಿಮೆಂಟ್ ಹೊತ್ತು ಮನೆ ಕಟ್ಟುವಂತವರು. ನಮ್ಮ ಕಾಲದ ಇಂಜಿನಿಯರ್ ಗಳು ಇವರೇ ಆಗಿರುತ್ತಿದ್ದರು. ಕೇವಲ ತಮ್ಮ ಯುಕ್ತಿಯಿಂದಲೇ ಸಂಪೂರ್ಣ ಮನೆ ಸುಂದರವಾಗಿ ಕಟ್ಟಲು ಅಡಿಪಾಯ ಹಾಕುತ್ತಿದ್ದರು ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಡಾ.ನಿಷ್ಠಿರುದ್ರಪ್ಪ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಸಂತರ ವಿಚಾರ ಹಾಗೂ ಸಾಧನೆಗಳನ್ನು ಪ್ರತಿಯೊಬ್ಬರು ಅನುಕರಣೆ ಮಾಡುವ ಮನೋಭಾವನೆ ಹೊಂದುವಂತಾಗಬೇಕು ಎಂದು ಹೇಳಿದರು.

ಶಿವಯೋಗಿ ಸಿದ್ಧರಾಮೇಶ್ವರರು 68 ಸಾವಿರ ವಚನಗಳನ್ನು ರಚಿಸಿ ಹಾಡಿದ್ದಾರೆ. ಅವುಗಳ ಪೈಕಿ ಈಗ 1,679 ವಚನಗಳು ಮಾತ್ರ ಲಭಿಸಿವೆ. ಶಿವಯೋಗಿ ಸಿದ್ದರಾಮೇಶ್ವರರು ಶ್ರೆ?ಷ್ಠ ವಚನಕಾರರಾಗಿದ್ದರು. ಸಮಾಜ ಸೇವೆಯಲ್ಲಿ ತೃಪ್ತಿ ಪಡೆಯುತ್ತಿದ್ದರು. ಅಧ್ಯಾತ್ಮ ಪರಂಪರೆ ಹೊಂದಿರುವ ದೇಶದಲ್ಲಿ ದಿವ್ಯಜ್ಞಾನಿಗಳನ್ನು ಮುಂದಿನ ಜನಾಂಗಕ್ಕೆ ಪರಿಚಯಿಸಲು ಅವರ ಚಿಂತನೆಗಳನ್ನು ಅನುಷ್ಠಾನಕ್ಕೆ ತರಬೇಕು ಎಂದು ಹೇಳಿದರು.

ಮಹಾನಗರ ಪಾಲಿಕೆಯ ಮಹಾಪೌರರಾದ ಬಿ.ಶ್ವೇತಾ ಅವರು ಅಧ್ಯಕ್ಷತೆ ವಹಿಸಿ ಮಾತಾನಾಡಿದರು.

ಕಾರ್ಯಕ್ರಮದಲ್ಲಿ ಸಮುದಾಯದ ಪಿಹೆಚ್ ಡಿ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮ ಆರಂಭಕ್ಕೂ ಮುನ್ನ ಕವಿತಾ ಗಂಗೂರು ಮತ್ತು ತಂಡದಿಂದ ವಚನ ಸಾಹಿತ್ಯಗಳನ್ನೊಳಗೊಂಡ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಮಹಾನಗರ ಪಾಲಿಕೆಯ ಸದಸ್ಯರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಜನಪ್ರತಿನಿಧಿಗಳು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

**ಅದ್ದೂರಿ ಮೆರವಣಿಗೆ; ಗಮನ ಸೆಳೆದ ಕಲಾ ತಂಡಗಳು:**

ಜಯಂತಿಯ ಅಂಗವಾಗಿ ನಗರದ ಕನಕ ದುರ್ಗಮ್ಮ ದೇವಸ್ಥಾನ ಆವರಣದಲ್ಲಿ ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಭಾವ ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಮಹಾನಗರ ಪಾಲಿಕೆಯ ಮಹಾಪೌರರಾದ ಬಿ.ಶ್ವೇತ ಅವರು ಮೆರವಣಿಗೆಗೆ ಚಾಲನೆ ನೀಡಿದರು.

ಮೆರವಣಿಗೆಯಲ್ಲಿ ಡೊಳ್ಳು ಕುಣಿತ, ತಾಷೆ ರಾಂಡೋಲ್, ಹಗಲು ವೇಷಧಾರಿಗಳ ನೃತ್ಯ ಪ್ರದರ್ಶನ ಸೇರಿದಂತೆ ನಾನಾ ಸಾಂಸ್ಕೃತಿಕ ಕಲಾತಂಡಗಳು ಮೆರವಣಿಗೆಗೆ ಮೆರಗು ನೀಡಿದವು.

ಜಯಂತಿಯ ಮೆರವಣಿಗೆಯು ಕನಕದುರ್ಗಮ್ಮ ದೇವಸ್ಥಾನದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತದ ಮಾರ್ಗವಾಗಿ ರಾಘವ ಕಲಾ ಮಂದಿರದ ವೇದಿಕೆ ಸಭಾಂಗಣದವರೆಗೆ ತಲುಪಿತು. ಮೆರವಣಿಗೆಯು ಅದ್ದೂರಿಯಾಗಿ, ಸಂಭ್ರಮದಿಂದ ನಡೆಯಿತು.

ಬೆಳಗಾವಿ ವರದಿ

WEDNESDAY, 17 JANUARY 2024

# ಕಣ್ಣಿನ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯ: ಮಾಜಿ ಶಾಸಕ ಅನಿಲ ಬೆನಕೆ

ಬೆಳಗಾವಿ: ಕಣ್ಣುಗಳು ತುಂಬಾ ಅಮೂಲ್ಯವಾದಂತಹ ಅಂಗವಾಗಿದ್ದು , ಜನರು ಕಣ್ಣುಗಳ ಆರೈಕೆ ಕಡೆ ಹೆಚ್ಚಿನ ಗಮನ ನೀಡಬೇಕು ಹಣ್ಣು ತರಕಾರಿ ಸೊಪ್ಪು ಹೆಚ್ಚಾಗಿ ಸೇವಿಸಿ, ಭಗವಂತ ನೀಡಿದ ಕಣ್ಣನ್ನು ಪ್ರತಿಯೊಬ್ಬರೂ ರಕ್ಷಣೆ ಮಾಡಿಕೊಳ್ಳವುದು ಎಲ್ಲರ ಕರ್ತವ್ಯ ಎಂದು ಮಾಜಿ ಶಾಸಕ ಅನಿಲ ಬೆನಕೆ ಹೇಳಿದರು.

ನಗರದ ಬೆಳಗಾವಿಯ ಸಾಯಿ ದೀಪ ಕಣ್ಣಿನ ಆಸ್ಪತ್ರೆ ಮತ್ತು ಸುರೇಶ ಯಾದವ ಫೌಂಡೇಶನ್ ವತಿಯಿಂದ ಆಯೋಜಿಸಲಾದ ಉಚಿತ ನೇತ್ರ ತಪಾಸಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದ ಅವರು,

ನಿವಾಸಿಗಳಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಕಣ್ಣುಗಳ ಆರೈಕೆಯ ಹೆಚ್ಚಿನ



ಜಾಗೃತಿ ಮೂಡಲಿಸಲಾಗುತ್ತದೆ. ಹೀಗಾಗಿ ಸಾಯಿ ದೀಪ ಕಣ್ಣಿನ ಆಸ್ಪತ್ರೆ ಮತ್ತು ಸುರೇಶ ಯಾದವ ಫೌಂಡೇಶನ್ ವತಿಯಿಂದ ಉಚಿತ ನೇತ್ರ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ ಎಲ್ಲರೂ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಸುರೇಶ ಯಾದವ ಫೌಂಡೇಶನ್ ಅಧ್ಯಕ್ಷರಾದ ಸುರೇಶ ಯಾದವ ಅವರು ಮಾತನಾಡಿ, ಹುಟ್ಟಿನಿಂದಲೇ ದೃಷ್ಟಿಯನ್ನು ಕಳೆದುಕೊಂಡವರು ಪ್ರಪಂಚವನ್ನು ನೋಡುವ ಭಾಗ್ಯದಿಂದ ವಂಚಿತರಾಗಿದ್ದಾರೆ.

ಆದರೆ ಬಹಳಷ್ಟು ಜನರು ತಮ್ಮ ನಿರ್ಲಕ್ಷದಿಂದ ಕಣ್ಣು ಕಳೆದುಕೊಂಡಿರುವ ಉದಾಹರಣೆಗೆ ಇದೆ. ಹೀಗಾಗಿ ಜೀವನದಲ್ಲಿ ಅತ್ಯಮೂಲ್ಯವಾದ ಕಣ್ಣು ಸಂರಕ್ಷಿತವಾಗಿರಬೇಕಾದರೆ ಕಾಲ ಕಾಲಕ್ಕೆ ತಪಾಸಣೆ ಹಾಗೂ ಕಾಳಜಿ ಬಹುಮುಖ್ಯ ಎಂದರು.

ಮನುಷ್ಯನಿಗೆ ಎಲ್ಲ ಸಂಪತ್ತು ಇದ್ದರೂ ಅದನ್ನು ಸವಿಯಬೇಕಾದರೆ ಆರೋಗ್ಯ ಉತ್ತಮವಾಗಿರಬೇಕು.

ಪ್ರಪಂಚ ನೋಡಿ ಆನಂದಿಸಬೇಕಾದರೆ ಕಣ್ಣನ್ನು ಜೋಪಾನವಾಗಿ ಇಟ್ಟುಕೊಳ್ಳಲು ಪ್ರತಿಯೊಬ್ಬರು ಮುಂದಾಗಬೇಕು. ಇಂತಹ ಉಚಿತ ಶಿಬಿರಗಳು ಜನರಿಗೆ ಉಪಯುಕ್ತವಾಗಲಿದೆ ಎಂದು ತಿಳಿಸಿದರು.

ಸುಮಾರು 100 ಜನರು ಈ ಶಿಬಿರದ ಉಪಯೋಗ ಪಡೆದುಕೊಂಡರು ಪಡೆದಯಕೊಂಡು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಶಿಬಿರದಲ್ಲಿ ಆಸ್ಪತ್ರೆಯ ಮ್ಯಾನೇಜರ ರಾಹುಲ ಹಿರೇಮಣಿ, ರವಿಕುಮಾರ ಪಂಡಿತ, ಬಸಿರಾ ಮೊಮಿನ , ಡಾ.ಅನುಜಾ ಸಮೀಣಾ, ದಿಲಾವರ, ಸುರೇಶ ಯಾದವ ಫೌಂಡೇಶನ್ ಸದಸ್ಯರಾದ ಮಲ್ಲಾರ ದೀಕ್ಷಿತ, ಅಕ್ಷಯ ಅಂಬಡಗಟ್ಟಿ, ಅಭಿಷೇಕ ಅಗಸಗಿ, ಶ್ರೀಶೈಲ ಹಿರೇಮಠ, ಬಿ. ಅರ್. ಪಾಟೀಲ, ಮಹೇಶ ಮಾವಿನಕಟ್ಟಿ, ಗಣಾಚಾರಿ, ರಾಜು ಪಾಟೀಲ, ಸತೀಶ ಲೋಕಲೇ, ಸಾಗರ ಕಿಣೆಕರ, ಶಿವಲಿಂಗ, ಮೃತ್ಯುಂಜಯ ಹಾಗೂ ಇತರರು ಇದ್ದರು.

## ಬೆಳಗಾವಿ ಹಾಗೂ ಚಿಕ್ಕೋಡಿಗೆ ನೂತನ ಜಿಲ್ಲಾಧ್ಯಕ್ಷರ ನೇಮಿಸಿದ ಬಿಜೆಪಿ

ಬೆಳಗಾವಿ: ರಾಜ್ಯ ಬಿಜೆಪಿ ಘಟಕ ಜಿಲ್ಲಾಧ್ಯಕ್ಷರನ್ನು ನೇಮಕ ಮಾಡಿ ಆದೇಶ ಹೊರಡಿಸಿದ್ದು ಬೆಳಗಾವಿ , ಗ್ರಾಮಾಂತರ ಹಾಗೂ ಚಿಕ್ಕೋಡಿ ಸಂಘಟನಾತ್ಮಕ ಜಿಲ್ಲಾ ಅಧ್ಯಕ್ಷರನ್ನು ನೇಮಿಸಿದೆ.

ಬೆಳಗಾವಿ ನಗರ ಜಿಲ್ಲಾಧ್ಯಕ್ಷರನ್ನಾಗಿ –ಗೀತಾ ಸುತಾರ್ ಅವರನ್ನು ನೇಮಿಸಲಾಗಿದೆ. ಬೆಳಗಾವಿ ಗ್ರಾಮಾಂತರ ಅಧ್ಯಕ್ಷರನ್ನಾಗಿ ಸುಭಾಷ್ ಪಾಟೀಲ್ ಅವರನ್ನು ನೇಮಿಸಿದೆ. ಇನ್ನೂ ಚಿಕ್ಕೋಡಿ ಅಧ್ಯಕ್ಷರನ್ನಾಗಿ ಸತೀಶ್ ಅಪ್ಪಾಜಿಗೋಳ್ ಅವರನ್ನು ನೇಮಕ ಮಾಡಿ ರಾಜ್ಯಾಧ್ಯಕ್ಷ ವಿಜಯೇಂದ್ರ ಆದೇಶ ಹೊರಡಿಸಿದ್ದಾರೆ. ಈ ಕುರಿತು ಮಾಧ್ಯಮ ಪ್ರಕಟಣೆ ಹೊರಡಿಸಿರುವ ವಿಜಯೇಂದ್ರ, ಒಟ್ಟು 39 ಸಂಘಟನಾ ಜಿಲ್ಲೆಗಳಿಗೆ ಅಧ್ಯಕ್ಷರ ನೇಮಕ ಮಾಡಿದ್ದಾರೆ.

## ರಾಷ್ಟ್ರಮಂದಿರದ ಭವ್ಯ ಸ್ವಾಗತಕ್ಕಾಗಿ ಸ್ವಚ್ಛತೀರ್ಥ ಅಭಿಯಾನಕ್ಕೆ ಮಾಜಿ ಶಾಸಕ ಅನಿಲ ಬೆನಕೆ ಸಹಭಾಗಿ



ಬೆಳಗಾವಿ: ರಾಷ್ಟ್ರ ಮಂದಿರದ ಭವ್ಯ ಸ್ವಾಗತಕ್ಕಾಗಿ ಸ್ವಚ್ಛತೀರ್ಥ ಅಭಿಯಾನದಲ್ಲಿ ಮಾಜಿ ಶಾಸಕ ಅನಿಲ ಬೆನಕೆ ಬೆಳಗಾವಿಯ ವೈಭವ ನಗರದ ಶ್ರೀ ಬಸವಣ್ಣ ದೇವಾಲಯದ ಆವರಣವನ್ನು ಭಕ್ತರೊಂದಿಗೆ ಸ್ವಚ್ಛಗೊಳಿಸುವ ಕಾರ್ಯ ಕ್ರಮದಲ್ಲಿ ಸಹಭಾಗಿಯಾದರು.

ಈ ಸಂದರ್ಭದಲ್ಲಿ ರಾಜ್ಯದೆಲ್ಲೆಡೆ ಎಲ್ಲಾ ದೇವಾಲಯಗಳಲ್ಲಿ ಸ್ವಚ್ಛತಾಕಾರ್ಯ ಯಶಸ್ವಿಯಾಗಿ ನೆರವೇರಲಿ. ಜನವರಿ 22 ರಂದು ಶ್ರೀರಾಮ ಜ್ಯೋತಿ ಬೆಳಗಲು ಸಿದ್ಧತೆಗಳು ಭಕ್ತಿ ಪೂರ್ವಕವಾಗಿ ಸಾಗಲಿ ಎಂದು ಮಾಜಿಶಾಸಕ ಅನಿಲ ಬೆನಕೆ ಆಶೆಯವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ವೈಭವ ನಗರ ರಹಿವಾಸಿಗಳು, ಹಿರಿಯರು ಹಾಗೂ ದೇವಸ್ಥಾನ ಕಮಿಟಿ ಸದಸ್ಯರು ಉಪಸ್ಥಿತರಿದ್ದರು.

# ಟ್ಯಾಂಕರ್ ಪಲ್ಟಿಯಾಗಿ ರಸ್ತೆಯಲ್ಲಿ ನೀರಿನಂತೆ ಹರಿದ ಡೀಸೆಲ್

ತುಮಕೂರು: ಚಾಲಕನ ನಿಯಂತ್ರಣ ತಪ್ಪಿದ ಡೀಸೆಲ್ ತುಂಬಿಕೊಂಡು ಹೋಗುತ್ತಿದ್ದ ಟ್ಯಾಂಕರ್ ಲಾರಿ ಉರುಳಿ ಬಿದ್ದಿರುವ ಘಟನೆ ಹಾಲುಕುರಿಕೆ ಗ್ರಾಮದಲ್ಲಿ ಬಳಿ ನಡೆದಿದೆ.

ಅತಿ ವೇಗವಾಗಿ ಬಂದ ಹಿನ್ನೆಲೆಯಲ್ಲಿ ಡಿಸೇಲ್ ಲಾರಿ ಏಕಾಏಕಿ ಪಲ್ಟಿಯಾಗಿದೆ. ಪರಿಣಾಮ ನೂರಾರು ಲೀಟರ್ ಡೀಸೆಲ್ ರಸ್ತೆ ಮೇಲೆ ನೀರಿನಂತೆ ಹರಿದಿದೆ. ಟ್ಯಾಂಕರ್ ಲಾರಿ ಉರುಳಿ ಬಿದ್ದ ಕೂಡಲೇ ಸಾಕಷ್ಟು ಜನರು ಅಪಾಯದ ನಡುವೆ



ಕ್ಯಾನ್ಗಳಲ್ಲಿ ಡೀಸೆಲ್ ತುಂಬಿಕೊಳ್ಳಲು ಮುಗಿಬಿದ್ದಿದ್ದಾರೆ. ಕೈಗೆ ಸಿಕ್ಕ ಸಿಕ್ಕ ವಸ್ತುಗಳಿಂದ ಡೀಸೆಲ್ ತುಂಬಿಸಿಕೊಳ್ಳಲು ಜನ ಮುಗಿ ಬಿದ್ದಿದ್ದರು. ಇತ್ತ ಡೀಸೆಲ್ಗಾಗಿ ಮುಗಿ ಬಿದ್ದ ಜನರಿಂದ ರಸ್ತೆ ಪೂರ್ತಿ ಟ್ರಾಫಿಕ್ ಜಾಮ್ ಉಂಟಾಗಿತ್ತು.

ಇದೇ ವೇಳೆ ಲಾರಿ ಪಲ್ಟಿಯಾದ ಪರಿಣಾಮ ಬೈಕ್ನಲ್ಲಿದ್ದ ಸರ್ವಮಂಗಳ ಎನ್ನುವವರಿಗೆ ಗಂಭೀರ ಗಾಯಗಳಾಗಿವೆ. ಕೂಡಲೇ ಅವರನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಆದರೆ ಈ ಘಟನೆಯಲ್ಲಿ ಯಾವುದೇ ಅನಾಹುತ ಸಂಭವಿಸಿಲ್ಲ. ಚಾಲಕ ಕೂಡ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಈ ವಿಷಯ ತಿಳಿದ ಕೂಡಲೇ ಸ್ಥಳಕ್ಕೆ ಹೊನ್ನವಳ್ಳಿ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ದೌಡಾಯಿಸಿ ನಿಗಾವಹಿಸಿದರು. ಆದರೆ ಸಾರ್ವಜನಿಕರನ್ನು ನಿಯಂತ್ರಿಸಲು ಪೊಲೀಸರು ಹರಸಾಹಸ ಪಟ್ಟಿದ್ದಾರೆ. ಈ ಘಟನೆ ಸಂಬಂಧ ತಿಪಟೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾರಿಗೆ ಅಪರಿಚಿತ ವಾಹನ ಡಿಕ್ಕಿ: ಇಬ್ಬರು ಸ್ಥಳದಲ್ಲೇ ಸಾವು

ತುಮಕೂರು: ರಾತ್ರಿ ಅಪರಿಚಿತ ವಾಹನ ಡಿಕ್ಕಿಯಾಗಿ ಬೆಂಗಳೂರಿನ ಆವಲಹಳ್ಳಿ ಮೂಲದ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಶಿರಾ ತಾಲೂಕಿನ ಕುಂಟೇಗೌಡನಹಳ್ಳಿ ಗೇಟ್ ಬಳಿ ನಡೆದಿದೆ.

ನಗರದ ಆವಲಹಳ್ಳಿ ಮೂಲದ ಮಹೇಶ್ (38) ಹಾಗೂ ಉಮೇಶ್ (40) ಮೃತ ದುರ್ದೈವಿಗಳು. ಇವರು ಬೆಂಗಳೂರಿನಿಂದ ಶಿರಾ ಕಡೆಗೆ ತೆರಳುತ್ತಿದ್ದರು. ಈ ವೇಳೆ ಕಾರು ಪಂಚರ್ ಆಗಿದ್ದರಿಂದ ಟೈರ್ ಅನ್ನು ಬದಲಿಸುತ್ತಿದ್ದರು. ಆಗ ಹಿಂಬಂದಿಯಿಂದ ಬಂದ ಅಪರಿಚಿತವಾಹನವೊಂದು ಡಿಕ್ಕಿಯಾಗಿದೆ.

ಪರಿಣಾಮ ಸ್ಥಳದಲ್ಲೇ ಇಬ್ಬರು ವ್ಯಕ್ತಿಗಳು ಸಾವನ್ನಪ್ಪಿದ್ದಾರೆ. ಇನ್ನು ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದು ಪರಿಶೀಲನೆ ನಡೆಸಿದ್ದಾರೆ. ಎರಡು ಮೃತದೇಹಗಳನ್ನ ತುಮಕೂರಿನ ಜಿಲ್ಲಾಸ್ಪತ್ರೆಗೆ ರವಾನೆ ಮಾಡಲಾಗಿದೆ. ಈ ಸಂಬಂಧ ಕಳ್ಳಂಬೆಳ್ಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಣ್ಣ–ತಮ್ಮಂದಿರ ಕಿತಾಟ: ಮಗ ಸತ್ತ ಬೇಸರದಲ್ಲಿ ನೇಣು ಬಿಗಿದುಕೊಂಡ ತಂದೆ



ಮಂಗಳೂರು: ಮಗ ಆತ್ಮಹತ್ಯೆ ಮಾಡಿಕೊಂಡ 13ನೇ ದಿನಕ್ಕೆ ತಂದೆ ಕೂಡ ಆತ್ಮಹತ್ಯೆ ಮಾಡಿಕೊಂಡ ಘಟನೆ ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲೂಕಿನ ಉಜಿರೆ ಗ್ರಾಮದಲ್ಲಿ ನಡೆದಿದೆ. ಪೆರ್ಲ ನಿವಾಸಿ ಯೊಗೀಶ್ ಪೂಜಾರಿ (41) ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಜ.4ರಂದು ಯೊಗೀಶ್ ಮತ್ತು ರೇಷ್ಮಾ ದಂಪತಿಗಳ ಪುತ್ರ ಯಕ್ಷಿತ್ (14) ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದನು. ಮಗನ ಉತ್ತರ ಕ್ರಿಯೆ ಜ.14 ಭಾನುವಾರದಂದು ನಡೆದಿತ್ತು. 8ನೇ ತರಗತಿ ಬಾಲಕ ಮನೆಯಲ್ಲಿ ಸುಸೈಡ್ ಮಾಡಿಕೊಂಡಿದ್ದನು.

ಯಕ್ಷಿತ್ ಆತ್ಮಹತ್ಯೆಗೆ ತಮ್ಮನ ಜೊತೆ ನಡೆದ ಗಲಾಟೆ ಕಾರಣ ಎನ್ನಲಾಗಿತ್ತು. ಆರು ವರ್ಷದ ತಮ್ಮನ ಜೊತೆ ಈ ಹಿಂದೆ ಕೂಡ ಗಲಾಟೆ ನಡೆದಿತ್ತು. ಈ ಗಲಾಟೆಯಲ್ಲಿ ತಮ್ಮ ಯಕ್ಷಿತ್ ಹೊಟ್ಟೆ ಮೇಲೆ ಕಚ್ಚಿ ಗಾಯ ಮಾಡಿದ್ದನು ಇದರಿಂದ ಮನನೊಂದು ಅಣ್ಣ ತಮ್ಮನ ಎದುರೆ ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಯಕ್ಷಿತ್ ಉಜಿರೆ ಖಾಸಗಿ ಶಾಲೆಯಲ್ಲಿ 8ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡಿಕೊಂಡಿದ್ದನು. ಮನೆಯ ರೂಂ ನಲ್ಲಿ ತಾಯಿಯ ಸೀರೆ ಬಳಸಿ ನೇಣು ಬಿಗಿದುಕೊಂಡಿದ್ದನು. ತಂದೆ –ತಾಯಿ ಕೆಲಸಕ್ಕೆ ಹೋದ ಬಳಿಕ ಆತ್ಮಹತ್ಯೆ ಮಾಡಿಕೊಂಡಿದ್ದನು.

ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಮಗನ ಆತ್ಮಹತ್ಯೆ ಪ್ರಕರಣ ದಾಖಲಾಗಿತ್ತು. ಇದೀಗ ಮಗ ಯಕ್ಷಿತ್ ಸಾವನ್ನಪ್ಪಿದ 13ನೇ ದಿನಕ್ಕೆ ತಂದೆ ಕೂಡ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

## ಶಿಕ್ಷಕರ ವೃತ್ತಿಪರ ಅಭಿವೃದ್ಧಿ ತರಬೇತಿ ಕಾರ್ಯಾಗಾರ



ಬೆಳಗಾವಿ: ನಗರದ ಈಫಾ ಹೋಟೆಲ್ ನಲ್ಲಿ ಲರ್ನಿಂಗ್ ಲಿಂಕ್ಸ್ ಫೌಂಡೇಶನ್, ನೀತಿ ಆಯೋಗ ಮತ್ತು ಶೆಲ್ ಇಂಡಿಯಾ ಸಹಯೋಗದಲ್ಲಿ ಶಿಕ್ಷಕರ ವೃತ್ತಿಪರ ಅಭಿವೃದ್ಧಿ ತರಬೇತಿ ಕಾರ್ಯಗಾರ ಉದ್ಘಾಟನೆ ಕಾರ್ಯಕ್ರಮವನ್ನು ಡಿಡಿಪಿಐ ಚಿಕ್ಕೋಡಿ ಶ್ರೀ ಎಸ್ ಎಲ್ ಹಂಚಾಟೆ, ಬಿ ಇ ಓ ಹುಕ್ಕೇರಿ ಶ್ರೀಮತಿ ಪ್ರತಿಭಾ ಪಾಟೀಲ್, ಬಿ ಇ ಓ ಬೆಳಗಾವಿ ಶ್ರೀಮತಿ ಎಲ್ಎಸ್ ಹಿರೇಮಠ್ ಹಾಗೂ ಇನ್ನಿತರ ಅತಿಥಿಗಳ ಉಪಸ್ಥಿತಿಯಲ್ಲಿ 29ನೇ ನವೆಂಬರ್ 2023ರಲ್ಲಿ ನೆರವೇರಿಸಲಾಗಿತ್ತು.

ಶೆಲ್ ಇಂಡಿಯಾದ ಸಾಮಾಜಿಕ ಕಾರ್ಯನಿರ್ವಹಣೆ ಸಲಹೆಗಾರ ದೀಪಕ್ ಜೋಷಿ, ಲರ್ನಿಂಗ್ ಲಿಂಕ್ಸ್ ಫೌಂಡೇಶನ್ ಅಸಿಸ್ಟೆಂಟ್ ವೈಸ್ ಪ್ರೆಸಿಡೆಂಟ್ ಮೊಹಮ್ಮದ್ ಕಮರೋದ್ದೀನ್ ಹಾಗೂ ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ ಶ್ರೀಮತಿ ಚಂದ್ರಲೇಖ ಕಾರ್ಯಗಾರವನ್ನು ಉದ್ದೇಶಿಸಿ ಮುಂದಿನ ಪೀಳಿಗೆಯ ನಾಯಕರನ್ನು ಪ್ರೇರೇಪಿಸಲು ಶಲ್, ನೆಕ್ಸ್ಟ್ ಕ್ಲೋರಸ್ ಶಿಕ್ಷಕರನ್ನು ಸಜ್ಜುಗೊಳಿಸುತ್ತಿದೆ.

ಯುವ ಮನಸ್ಸುಗಳನ್ನು ಪೋಷಿಸುವ ಮತ್ತು ಸುಸ್ಥಿರ ಪರಿಹಾರಗಳನ್ನು ಕಂಡುಹಿಡಿಯುವ ಪ್ರಯಾಣ ಮತ್ತಷ್ಟು ಪ್ರೇರಣೆಯನ್ನು ನೀಡಲಿದೆ ಎಂದು ಅಭಿಪ್ರಾಯಪಟ್ಟರು ಕಾರ್ಯಕ್ರಮದಲ್ಲಿ 25 ಎಟಿಎಲ್ ಶಾಲೆಗಳಿಂದ ಒಟ್ಟು 36 ಶಿಕ್ಷಕರು ಹಾಜರಾಗಿದ್ದರು.


ಈ ಕಾರ್ಯಗಾರದ ಮುಂದುವರಿದ ಭಾಗವಾಗಿ ರಿಫ್ರೆಶರ್–1 ತರಬೇತಿಯನ್ನು 9ನೇ ಜನವರಿ 2024 ರಂದು ಈಫಾ ಹೋಟೆಲ್ ನಲ್ಲಿ ಆಯೋಜಿಸಲಾಗಿತ್ತು. 16 ಎಟಿಎಲ್ ಶಾಲೆಗಳಿಂದ ಒಟ್ಟು 19 ಶಿಕ್ಷಕರು ತರಬೇತಿಯ ಲಾಭವನ್ನು ಪಡೆದರು.

## ಎಸ್ಸಿ ಸಮುದಾಯಕ್ಕೆ ಸ್ಮಶಾನಭೂಮಿ ಮಂಜೂರು

ಹುಕ್ಕೇರಿ: ತಾಲೂಕಿನ ಬಸ್ತವಾಡ ಗ್ರಾಮದ ಪರಿಶಿಷ್ಟ ಜಾತಿ (ಎಸ್ಸಿ) ಸಮುದಾಯಕ್ಕೆ ಸ್ಮಶಾನ ಭೂಮಿ ಮಂಜೂರಾತಿಯಾಗಿದ್ದು ಈ ಮೂಲಕ ಬಹುವರ್ಷಗಳ ಬೇಡಿಕೆ ಈಡೇರಿಸಲಾಗಿದೆ ಎಂದು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ದೌರ್ಜನ್ಯ ನಿಯಂತ್ರಣ ಜಿಲ್ಲಾ ಸಮಿತಿ ಮಾಜಿ ಸದಸ್ಯ ಸುರೇಶ ತಳವಾರ ಹೇಳಿದರು.

ಕೊಬಾಗಿಯಲ್ಲಿ ನಡೆದ ದಲಿತರ ಬೃಹತ್ ಸಮಾವೇಶದಲ್ಲಿ ಬಸ್ತವಾಡ ಮುಖಂಡರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಪ್ರತಿಯೊಬ್ಬರ ಜೀವನ ಪಯಣದ ಕೊನೆ ಹಂತವಾದ ಅಂತ್ಯಸಂಸ್ಕಾರ ಗೌರವಯುತ ಮುಕ್ತಿ ಕಾಣಬೇಕೆಂಬ ಆಶಯ ಹೊಂದಿರುತ್ತಾರೆ. ಈ ನಿಟ್ಟಿನಲ್ಲಿ ಎಸ್ಸಿ ಸಮುದಾಯಕ್ಕೆ ಬೇಕಾದ ಅಗತ್ಯ ಸ್ಮಶಾನಭೂಮಿ ದೊರಕಿಸಿಕೊಡಲಾಗಿದೆ ಎಂದರು.

ಬಹುವರ್ಷಗಳಿಂದ ಸ್ಮಶಾನಭೂಮಿ ಇಲ್ಲದ್ದರಿಂದ ಅಲ್ಲಿನ



ಸಮುದಾಯ ಅಂತ್ಯಸಂಸ್ಕಾರಕ್ಕೆ ಹೆಣಗಾಡಬೇಕಾದ ಪರಿಸ್ಥಿತಿಯಿತ್ತು. ಜತೆಗೆ ನಿರಂತರ ಮನವಿ ಸಲ್ಲಿಕೆ, ಹೋರಾಟ ಮಾಡಿದ್ದರು. ತಮ್ಮ ಅಧಿಕಾರವಧಿಯಲ್ಲಿ ಗ್ರಾಮದ ಸರ್ವೆ ನಂ. 71ರಲ್ಲಿ 12 ಗುಂಟೆ ಜಮೀನನ್ನು ಈ ಸಮುದಾಯಕ್ಕೆ ಹಂಚಿಕೆ ಮಾಡಲಾಗಿದೆ. ಬರುವ ದಿನಗಳಲ್ಲಿ ಈ ಸ್ಮಶಾನ ಭೂಮಿಯಲ್ಲಿ ನೀರು, ಬೆಳಕಿನ ಸೌಲಭ್ಯ, ಶೆಡ್ ಹಾಗೂ ಸುತ್ತಲೂ ಕಂಪೌಂಡ್ ನಿರ್ಮಾಣ ಸೇರಿದಂತೆ ಸ್ಮಶಾನದ ಸಮಗ್ರ ಅಭಿವೃದ್ಧಿಗೆ ಅಗತ್ಯ ಅನುದಾನ ಬಿಡುಗಡೆಗೆ ಪ್ರಯತ್ನಿಸಲಾಗುವುದು ಎಂದು ಅವರು ಹೇಳಿದರು.

ಥಳದೇಶ್ವರ ಟ್ರಸ್ಟ ಕಮೀಟಿ ಅಧ್ಯಕ್ಷ ಕೆಂಪಣ್ಣಾ ಮಾಳಗೆ, ಉಪಾಧ್ಯಕ್ಷ ಕೆಂಪಣ್ಣಾ ದೊಡಮನಿ, ಮುಖಂಡರಾದ ಶಂಕರ ತಿಪ್ಪನಾಯಿಕ, ಅರ್ಜುನ ದೊಡಮನಿ, ಸಂಜಯ ಗಾಂಜಿ, ಪರಶುರಾಮ ತಿಪ್ಪನಾಯಿಕ, ಕಿರಣ ಚಕ್ರವರ್ತಿ, ಕಾಡಪ್ಪಾ ತಿಪ್ಪನಾಯಿಕ, ಸಾತಪ್ಪಾ ದೊಡಮನಿ, ಶ್ರೀಮಂತ ದೊಡಮನಿ, ಶಿವರುದ್ರ ಗಾಂಜಿ, ಹೂವಪ್ಪಾ ಗಾಂಜಿ ಮತ್ತಿತರರು ಉಪಸ್ಥಿತರಿದ್ದರು.

# ಜ. 19 ರಂದು ಇಪ್ಯಾಕ್ ಡ್ಯೂರೇಬಲ್ ಐಪಿಓ

ಹುಬ್ಬಳ್ಳಿ: ಇಪ್ಯಾಕ್ ಡ್ಯೂರೇಬಲ್ ಲಿಮಿಟೆಡ್, ಶುಕ್ರವಾರ, ಜನವರಿ 19 ರಂದು ಈಕ್ವಿಟಿ ಷೇರುಗಳ ಇನಿಷಿಯಲ್ ಪಬ್ಲಿಕ್ ಆಫರಿಂಗ್ ( ಐಪಿಒ) ಗೆ ಸಂಬಂಧಿಸಿದಂತೆ ಅದರ ಬಿಡ್/ಆಫರ್ ತೆರೆಯಲಿದೆ.

ರೂ [0] ವರೆಗಿನ ರೂ10 ಮುಖಬೆಲೆಯ ಈಕ್ವಿಟಿ ಷೇರುಗಳ ಒಟ್ಟು ಆಫರ್ ಗಾತ್ರ ರೂ 4,000 ಮಿಲಿಯನ್ [ರೂ 400 ಕೋಟಿ] ಮತ್ತು 10,437,047 ಈಕ್ವಿಟಿ ಷೇರ್ ಗಳವರೆಗಿನ ಮಾರಾಟದ ಆಫರ್ ಒಳಗೊಂಡಿದೆ.

ಬಿಡ್/ಆಫರ್ ಶುಕ್ರವಾರ, ಜನವರಿ 19, 2024ರಂದು ಚಂದಾದಾರಿಕೆಗಾಗಿ ತೆರೆಯುತ್ತದೆ ಮತ್ತು ಮಂಗಳವಾರ, ಜನವರಿ 23, 2024ರಂದು ಮುಕ್ತಾಯವಾಗುತ್ತದೆ.

ಆಫರ್‌ನ ದರ ಪಟ್ಟಿಯನ್ನು ಪ್ರತಿ ಈಕ್ವಿಟಿ ಷೇರಿಗೆ ರೂ218 ರಿಂದ ರೂ230ಕ್ಕೆ ನಿಗದಿಪಡಿಸಲಾಗಿದೆ.

ಕನಿಷ್ಠ 65 ಈಕ್ವಿಟಿ ಷೇರುಗಳಿಗೆ ಮತ್ತು 65 ಇಕ್ವಿಟಿ ಷೇರುಗಳ ಮಲ್ಟಿಪಲ್ ಗಳಲ್ಲಿ ಬಿಡ್ ಮಾಡಬಹುದು.

ಕಂಪನಿಯು ಈಕ್ವಿಟಿ ಷೇರುಗಳ ತಾಜಾ ವಿತರಣೆಯಿಂದ ಬಂದ ನಿವ್ವಳ ಆದಾಯವನ್ನು ಉತ್ಪಾದನಾ ಸೌಲಭ್ಯಗಳ ವಿಸ್ತರಣೆ/ ಸ್ಥಾಪನೆಗೆ, ಮರುಪಾವತಿ ಮತ್ತು /ಅಥವಾ ಪೂರ್ವಪಾವತಿ, ಭಾಗಶಃ ಅಥವಾ ಪೂರ್ಣವಾಗಿ, ನಮ್ಮ ಕಂಪನಿಯ ಕೆಲವು ಬಾಕಿ ಸಾಲಗಳು ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಕ್ಕೆ ಬೇಕಾಗುವ ಬಂಡವಾಳ ವೆಚ್ಚಕ್ಕೆ ಬಳಸಿಕೊಳ್ಳಲು ಪ್ರಸ್ತಾಪಿಸುತ್ತದೆ.

10,437,047ವರೆಗಿನ ಈಕ್ವಿಟಿ ಷೇರುಗಳ ("ಆಫರ್ ಮಾಡಿದ ಷೇರುಗಳು") ಮಾರಾಟದ ಕೊಡುಗೆಯು ಬಜರಂಗ್ ಬೋತ್ರಾ ಅವರಿಂದ 1,172,976 ಈಕ್ವಿಟಿ ಷೇರುಗಳನ್ನು, ಲಕ್ಷ್ಮಿ ಪತ್ ಬೋತ್ರಾ ಅವರಿಂದ 666,798 ಇಕ್ವಿಟಿ ಷೇರುಗಳನ್ನು, 748,721 ಷೇರುಗಳಿಂದ 748,721 ಷೇರುಗಳು ಅಜಯ್ ಡಿಡಿ ಸಿಂಘಾನಿಯಾ ಅವರಿಂದ, ಪಿಂಕಿ ಅಜಯ್ ಸಿಂಘಾನಿಯಾ ಅವರಿಂದ 286,351 ಈಕ್ವಿಟಿ ಷೇರುಗಳು, ಇಪ್ರೀತಿ ಸಿಂಘಾನಿಯಾ ಅವರಿಂದ 286,351 ಈಕ್ವಿಟಿ ಷೇರುಗಳು, ನಿಖಿಲ್ ಬೋತ್ರಾ ಅವರಿಂದ 442,905ವರೆಗೆ ಈಕ್ವಿಟಿ ಷೇರುಗಳು, ರಾಜತ್‌ಕುಮಾರ್ ಬೋತ್ರಾ ಅವರಿಂದ 379,633 ವರೆಗಿನ ಈಕ್ವಿಟಿ ಷೇರುಗಳು, ಇಂಡಿಯಾ ಅಡ್ವಾಂಟೇಜ್ ಫಂಡ್ S4 I ಯಿಂದ 4,630,284ವರೆಗಿನ ಈಕ್ವಿಟಿ ಷೇರುಗಳನ್ನು ಮತ್ತು ಡೈನಾಮಿಕ್ ಇಂಡಿಯಾ ಫಂಡ್ ಖ4 ಯುಎಸ್ I ನಿಂದ 631,402 ವರೆಗಿನ ಈಕ್ವಿಟಿ ಷೇರುಗಳು ಒಳಗೊಂಡಿದೆ.

(ಒಟ್ಟಾರೆ ಇನ್ವೆಸ್ಟರ್ ಸೆಲ್ಲಿಂಗ್ ಷೇರ್ ಹೋಲ್ಡರ್ಸ್ ಮತ್ತು "ಪ್ರಮೋಟರ್ ಸೆಲ್ಲಿಂಗ್ ಷೇರ್ ಹೋಲ್ಡರ್ಸ್" ಮತ್ತು "ಪ್ರಮೋಟರ್ ಗ್ರೂಪ್ ಸೆಲ್ಲಿಂಗ್ ಷೇರ್ ಹೋಲ್ಡರ್ಸ್", ಮತ್ತು ಸೆಲ್ಲಿಂಗ್ ಷೇರ್ ಹೋಲ್ಡರ್ಸ್ ಮತ್ತು ಮಾರಾಟ ಮಾಡುವ ಷೇರುದಾರರಿಂದ ಈಕ್ವಿಟಿ ಷೇರುಗಳ ಮಾರಾಟಕ್ಕೆ ಅಂತಹ ಕೊಡುಗೆಗಳು, "ಆಫರ್ ಫಾರ್ ಸೇಲ್")

ಈ ಈಕ್ವಿಟಿ ಷೇರುಗಳನ್ನು ಜನವರಿ 12, 2024ರಂದು ಕಂಪನಿಯ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ನೀಡಲಾಗುತ್ತಿದೆ. ಉತ್ತರ ಪ್ರದೇಶದ ಕಾನ್ಪುರದಲ್ಲಿ ("ಆರ್‌ಎಚ್‌ಪಿ") ರಿಜಿಸ್ಟ್ರಾರ್ ಆಫ್ ಕಂಪನಿಗಳಿಗೆ ಸಲ್ಲಿಸಲಾಗಿದೆ ಮತ್ತು ಬಿಎಸ್‌ಇ ಲಿಮಿಟೆಡ್ ("ಬಿಎಸ್‌ಇ ") ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ("ಎನ್‌ಎಸ್‌ಇ")ನಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ.

## ಶ್ರೀ ಮುರುಗೇಶ ನಿರಾಣಿ ಮಾತೃವಿಯೋಗ ಡಾ.ಪ್ರಭಾಕರ ಕೋರೆ ಕಂಬನಿ

ಬೆಳಗಾವಿ: ಮಾಜಿ ಸಚಿವ ಮುರುಗೇಶ ನಿರಾಣಿಯವರ ಮಾತೋಶ್ರೀ ಸುಶೀಲಾಬಾಯಿವರು ನಿಧನಹೊಂದಿರುವುದು ತುಂಬ ದುಃಖವನ್ನು ತಂದಿದೆ ಎಂದು ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಕಂಬನಿ ಮಿಡಿದಿದ್ದಾರೆ. ಶ್ರೀ ನಿರಾಣಿಯವರ ಏಳ್ಗೆಯಲ್ಲಿ ಅವರ ಆಶೀರ್ವಾದ ಅನುಪಮವಾಗಿತ್ತು. ನಿರಾಣಿಯವರ ರಾಜಕೀಯ ಹಾಗೂ ಉದ್ಯಮಕ್ಷೇತ್ರಕ್ಕೂ ಪ್ರೇರಕಶಕ್ತಿಯಾಗಿದ್ದರು.

ಮಾತೋಶ್ರೀಯವರ ಅಕಾಲಿಕ ನಿಧನ ನಿರಾಣಿಯವರ ಕುಟುಂಬಕ್ಕೆ ಆಘಾತವನ್ನುಂಟುಮಾಡಿದೆ. ಭಗವಂತನು ಅವರ ಆತ್ಮಕ್ಕೆ ಚಿರಶಾಂತಿಯನ್ನು ನೀಡಲಿ, ಅಗಲಿಕೆಯ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಪರಿವಾರಕ್ಕೆ ಕರುಣಿಸಲೆಂದು ಕೆಎಲ್‌ಇ ಸಂಸ್ಥೆಯ ಪರವಾಗಿ ಡಾ.ಕೋರೆಯವರುಭಾವಪೂರ್ಣ ಶ್ರದ್ಧಾಂಜಲಿಯನ್ನು ಸಲ್ಲಿಸಿದ್ದಾರೆ.

## ಹೆಗಡೆ ಮಾತುಗಳನ್ನು ಸಮರ್ಥಿಸಲ್ಲ




ಚಿಕ್ಕಮಗಳೂರು: ಬಿಜೆಪಿ ಸಂಸದ ಅನಂತಕುಮಾರ ಹೆಗಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕುರಿತು ವಿವಾದಾತ್ಮಕ ಮತ್ತು ಅವಹೇಳನಕಾರಿ ಹೇಳಿಕೆ ನೀಡಿದ ದಿನವೇ ಆ ಮಾತುಗಳನ್ನು ಅವರ ಪಕ್ಷದವರೂ ಸಮರ್ಥಿಸಲ್ಲ ಎಂದು ಮಾಜಿ ಶಾಸಕ ಸಿಟಿ ರವಿ ಹೇಳಿದರು.

ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತಾಡಿದ ಅವರು, ಹಿರಿಯರಿಗೆ ಮತ್ತು ಸ್ಥಾನಕ್ಕೆ ಗೌರವ ನೀಡಲೇಬೇಕು, ಅವರ ಮನಸ್ಸಿಗೆ ಘಾಸಿಯುಂಟು ಮಾಡುವ ಭಾಷೆ ಬಳಕೆಯಾದರೆ ಅದನ್ನು ತಾನು ಸಮರ್ಥಿಸುವುದಿಲ್ಲ ಎಂದು ರವಿ ಹೇಳಿದರು.

ಹೆಗಡೆಯವರ ಕಾರ್ಯಶೈಲಿ ಭಿನ್ನವಾಗಿರಬಹುದು, ಹಾಗಂತ ರಾಜ್ಯದ ಮುಖ್ಯಮಂತ್ರಿಯ ಬಗ್ಗೆ ಏಕವಚನದಲ್ಲಿ ಮಾತಾಡುವುದು ಸರಿಯಲ್ಲ ಎಂದು ಅವರು ಹೇಳಿದರು. ಹಿಂದೆ, ಮೊಘಲರ ಆಳ್ವಿಕೆಯಲ್ಲಿ ಮತ್ತ ದಕ್ಷಿಣ ಭಾರತದಲ್ಲಿ ಆದಿಲ್ ಶಾಹಿ, ನಿಜಾಮ ಮೊದಲಾದವರ ಅರಸೊತ್ತಿಗೆಯ ಕಾಲದಲ್ಲಿ 42,000 ಕ್ಕಿಂತ ಹೆಚ್ಚು ದೇವಸ್ಥಾನಗಳನ್ನು ಬೀಳಿಸಿ ಮಸೀದಿಗಳನ್ನು ನಿರ್ಮಿಸಿದ್ದು ಸತ್ಯ, ಮಂದಿರವಿದ್ದ ಜಾಗದಲ್ಲಿ ಕಟ್ಟಲಾಗಿರುವ ಮಸೀದಿಯಲ್ಲಿ ನಮಾಜ್ ಸಲ್ಲಿಸುವುದು ಹರಾಮ್ ಅಂತ ಭಾರತೀಯ ಮುಸಲ್ಮಾನರಿಗೆ ಮನವರಿಕೆಯಾದ ದಿನ ಎಲ್ಲವೂ ತಿಳಿಯಾಗಲಿದೆ ಎಂದು ರವಿ ಹೇಳಿದರು.

## ವಿದ್ಯಾರ್ಥಿನಿಗೆ ಲಾರಿ ಡಿಕಿ ಸ್ಥಳದಲ್ಲೇ ಸಾವು



ಚಿತ್ರದುರ್ಗ: ಬಸ್ಸಿಗಾಗಿ ಕಾಯುತ್ತಿದ್ದ ವಿದ್ಯಾರ್ಥಿನಿಗೆ ಲಾರಿ ಡಿಕ್ಕಿ ಹೊಡೆದ ಭೀಕರ ಅಪಘಾತ ರಾಷ್ಟ್ರೀಯ ಹೆದ್ದಾರಿ 4ರಲ್ಲಿ ನಡೆದಿದೆ. ಲಾರಿ ಡಿಕ್ಕಿ ಹೊಡೆತಕ್ಕೆ ವಿದ್ಯಾರ್ಥಿನಿ ರಾಷ್ಟ್ರೀಯ ಹೆದ್ದಾರಿಯಿಂದ ಸರ್ವೀಸ್ ರಸ್ತೆಗೆ ಹಾರಿ ಬಿದ್ದಿದ್ದಾಳೆ.

ವಿಜಾಪುರ ಗೊಲ್ಲರಹಟ್ಟಿ ಗ್ರಾಮದ 19 ವರ್ಷದ ಸುಚಿತ್ರ ಸ್ಥಳದಲ್ಲೇ ಸಾವನ್ನಪ್ಪಿದ್ದಾಳೆ. ಚಿತ್ರದುರ್ಗ ತಾಲೂಕಿನ ವಿಜಾಪುರ ಗೊಲ್ಲರಹಟ್ಟಿ ಬಳಿ ಈ ದುರ್ಘಟನೆ ನಡೆದಿದೆ. ಗೊಲ್ಲರಹಟ್ಟಿ ಬಳಿ ಕಾಲೇಜಿಗೆ ಹೋಗಲು 3 ಜನ ವಿದ್ಯಾರ್ಥಿನಿಯರು ಬಸ್ಸಿಗಾಗಿ ಕಾಯುತ್ತಾ ನಿಂತಿದ್ದರು. ದಾವಣಗೆರೆಯಿಂದ ಬೆಂಗಳೂರಿಗೆ ಹೊರಟಿದ್ದ ಲಾರಿ ಭಯಾನಕವಾಗಿ ಡಿಕ್ಕಿ ಹೊಡೆದಿದೆ.

ಲಾರಿ ಚಾಲಕನ ಅಜಾಗರೂಕತೆಯೇ ಅಪಘಾತಕ್ಕೆ ಕಾರಣ ಎನ್ನಲಾಗಿದೆ. ಭೀಕರ ಅಪಘಾತದಿಂದ ರಾಷ್ಟ್ರೀಯ ಹೆದ್ದಾರಿಯಲ್ಲಿ ಕೆಲ ಕಾಲ ವಾಹನ ಸಂಚಾರಕ್ಕೆ ಅಡ್ಡಿಯಾಗಿತ್ತು. ಭರಮಸಾಗರ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಪದವೀಧರ ಶಿಕ್ಷಕರ ನೇಮಕಾತಿಯಲ್ಲಿ ವಿಳಂಬ: ಮನನೊಂದು ಶಿಕ್ಷಕ ಸಾವು



ರಾಯಚೂರು: ಪದವೀಧರ ಶಿಕ್ಷಕರ ನೇಮಕದಲ್ಲಿ ಆಯ್ಕೆಯಾಗಿದ್ದೂ ನೇಮಕಾತಿ ವಿಳಂಬವಾಗಿದ್ದರಿಂದ ದೇವದುರ್ಗ ತಾಲೂಕಿನ ಮುಂಡರಗಿ ಗ್ರಾಮದ ಶಿಕ್ಷಕನೋರ್ವ ಮಾನಸಿಕ ಖಿನ್ನತೆಯಿಂದ ಸಾವನ್ನಪ್ಪಿದ್ದಾನೆ.

ದುರಗಪ್ಪ ನರಸಪ್ಪ ಪೂಲಭಾವಿ (33) ಮೃತ ಶಿಕ್ಷಕ. ಇವರು 4 ತಿಂಗಳ ಮಗು, ಪತ್ನಿ, ತಂದೆ, ತಾಯಿಯನ್ನು ಅಗಲಿದ್ದಾರೆ. ದುರಗಪ್ಪನವರು ಪದವೀಧರರ ಶಿಕ್ಷಕರ ನೇಮಕಾತಿಯ ಎರಡನೇ ಹಂತದಲ್ಲಿ ನಡೆದ ಕಲ್ಯಾಣ ಕರ್ನಾಟಕ ಉಳಿಕೆ ವೃಂದದ ಹುದ್ದೆಯಲ್ಲಿ ಆಯ್ಕೆಯಾಗಿದ್ದರು. ಇತ್ತೀಚೆಗೆ ಕೌನ್ಸಿಲಿಂಗ್‌ನಲ್ಲಿ ದಾಖಲೆ ಪರಿಶೀಲನೆಯಲ್ಲಿ ಭಾಗಿಯಾಗಿದ್ದರು. ಮೊದಲ ಹಂತದಲ್ಲಿ ಆಯ್ಕೆಯಾಗದಿದ್ದರಿಂದ ಮತ್ತು ದೀರ್ಘಕಾಲ ನೇಮಕಾತಿ ವಿಳಂಬದ ಕಾರಣದಿಂದ ಶಿಕ್ಷಕ ಮಾನಸಿಕ ಖಿನ್ನತೆಗೆ ಜಾರಿದ್ದರು.

ಕೊನೆಗೆ ಬೆಂಗಳೂರಿನ ನಿಮಾನ್ಸ್‌ನಲ್ಲಿ ಚಿಕಿತ್ಸೆ ಫಲಿಸದೆ ಸಾವಿಗೆ ತುತ್ತಾಗಿದ್ದಾರೆ.



BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089